ಶನಿವಾರ,21.02.2026
ಬೆಂಗಳೂರು, ಬೆಲೆ: 5ರೂ.2 ಪುಟಗಳು
ಸಂಪುಟ 01 – ಸಂಚಿಕೆ 149

Digital Varthe Kannada Daily
Volume 01 - Issue 149
Saturday, 21.02.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಸಾಕು ಮಗ, ಸಹೋದರಿಯಿಂದಲೇ ಮಹಿಳೆಯ ಕೊಲೆ



ಮೃತ ಮಹಿಳೆ





**ತುಮಕೂರು:** ತುರುವೇಕೆರೆ ತಾಲ ೂಕಿನ ಶಿಕ್ಷಣ ಇಲಾಖೆಯ ಬಿಇಒ ಕಚೇರಿಯಲ್ಲಿ ಎಫ್‌ಡಿಎ ಆಗಿ ಕಾರ್ಯ ನಿರ್ವಹಿಸುತ್ತಿದ್ದ ಮಹಿಳೆಯನ್ನು ಕ್ಷುಲ್ಲಕ ಕಾರಣಕ್ಕೆ ಆಕೆಯ ಸಾಕು ಮಗ ಹಾಗೂ ಸಹೋದರಿಯೇ ಕೊಲೆ ಮಾಡಿದ ಹೃದಯವಿದ್ರಾವಕ ಘಟನೆ ಚಿಕ್ಕನಾಯ ಕನಹಳ್ಳಿ ತಾಲೂಕಿನ ಜೋಗಿಹಳ್ಳಿ ಗ್ರಾಮದಲ್ಲಿ ಬೆಳಕಿಗೆ ಬಂದಿದೆ. ಜಯಲಕ್ಷ್ಮೀ ಮೃತ ಮಹಿಳೆಯಾಗಿದ್ದು, ಪ್ರಕರಣ ಸಂಬಂಧ ಅನುಸೂಯಾ ಮತ್ತು ಚಂದ್ರಶೇಖರ್ ಎಂಬ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಘಟನೆಯ ನಂತರ ಜಯಲಕ್ಷ್ಮೀ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ ಎಂದು ಆರೋಪಿಗಳು ಕುಟುಂಬಸ್ಥರು ಮತ್ತು ಸ್ಥಳೀಯರನ್ನು ನಂಬಿಸಲು ಪ್ರಯತ್ನಿಸಿದ್ದರು. ಆದರೆ ಈ ಸಾವಿನ ಬಗ್ಗೆ ಅನುಮಾನಗೊಂಡ ಶ್ರೀನಿವಾಸ್ ಎಂಬ ವ್ಯಕ್ತಿ ಚಿಕ್ಕನಾಯಕನಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದರಿಂದ ಪ್ರಕರಣ ಹೊಸ ತಿರುವು ಪಡೆದುಕೊಂಡಿತು. ದೂರು ಆಧಾರವಾಗಿ ತನಿಖೆ ಆರಂಭಿಸಿದ ಪೊಲೀಸರು, ಅಂತ್ಯಕ್ರಿಯೆಗೆ ಸಿದ್ಧಪಡಿಸಿದ್ದ ಶವವನ್ನು ಮರಣೋತ್ತರ ಪರೀಕ್ಷೆಗೆ ರವಾನೆ ಮಾಡಿದರು.

ಪರಿಶೀಲನೆ ವೇಳೆ ಜಯಲಕ್ಷ್ಮಿಯೊಂದಿಗೆ ವಾಸವಿದ್ದ ಸಾಕು ಮಗ ಚಂದ್ರಶೇಖರ್ ಮತ್ತು ಸಹೋದರಿ ಅನುಸೂಯಾವನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಯಿತು. ವಿಚಾರಣೆ ವೇಳೆ ತಡರಾತ್ರಿ ಜಯಲಕ್ಷ್ಮಿಯನ್ನು ಉಸಿರುಗಟ್ಟಿಸಿ ಕೊಲೆಗೈದಿರುವುದನ್ನು ಆರೋಪಿಗಳು ಒಪ್ಪಿಕೊಂಡಿರುವುದಾಗಿ ಪೊಲೀಸ್ ಮೂಲಗಳು ತಿಳಿಸಿವೆ.

ಮೃತ ಜಯಲಕ್ಷ್ಮೀ ಗಂಡನನ್ನು ಕಳೆದುಕೊಂಡು ಹಲವು ವರ್ಷಗಳಿಂದ ಒಬ್ಬರೇ ಜೀವನ ನಡೆಸುತ್ತಿದ್ದರು. ಮಕ್ಕಳಿಲ್ಲದ ಕಾರಣ ಸುಮಾರು 20 ವರ್ಷಗಳ ಹಿಂದೆ ಸಹೋದರಿ ಅನುಸೂಯಾ ಮಗ ಚಂದ್ರಶೇಖರ್‌ನನ್ನು ದತ್ತು ಪಡೆದು ಸಾಕಿಕೊಂಡಿದ್ದರು. ಇದೇ ವೇಳೆ ಶ್ರೀನಿವಾಸ್ ಎಂಬಾತ ಜಯಲಕ್ಷ್ಮಿಯ ಆತ್ಮೀಯ ಸ್ನೇಹಿತನಾಗಿ ಅವರೊಂದಿಗೆ ಕಳೆದ ಹಲವು ವರ್ಷಗಳಿಂದ ಸಹಜೀವನ ನಡೆಸುತ್ತಿದ್ದಾನೆ ಎಂಬುದು ತನಿಖೆಯಲ್ಲಿ ಬಹಿರಂಗವಾಗಿದೆ.

ಎಂಟು ತಿಂಗಳ ಹಿಂದೆ ತುಮಕೂರಿನಲ್ಲಿ ವಾಸವಿದ್ದ ಅನುಸೂಯಾ ಮತ್ತು ಚಂದ್ರಶೇಖರ್ ಜೋಗಿಹಳ್ಳಿಯಲ್ಲಿರುವ ಜಯಲಕ್ಷ್ಮೀ ನಿವಾಸಕ್ಕೆ ಬಂದು ವಾಸ ಆರಂಭಿಸಿದ್ದರು. ಈ ಸಮಯದಲ್ಲಿ ಶ್ರೀನಿವಾಸ್ ಮನೆ ಬಿಡುವಂತೆ ಒತ್ತಡ ಹೇರುವ ಮೂಲಕ ಅವರನ್ನು ದೂರ ಮಾಡಲಾಗಿತ್ತು ಎನ್ನಲಾಗಿದೆ. ನಂತರ ಜಯಲಕ್ಷ್ಮೀ ತುರುವೇಕೆರೆಯಲ್ಲಿ ಹೊಸ ಮನೆ ಮಾಡಿಕೊಳ್ಳಲು ನಿರ್ಧರಿಸಿ ಬಾಡಿಗೆ ಮನೆಗೆ ಮುಂಗಡ ಹಣ ಕೂಡ ಪಾವತಿಸಿದ್ದರು.

ಜಯಲಕ್ಷ್ಮೀ ಮನೆ ಬಿಟ್ಟು ತೆರಳುವ ನಿರ್ಧಾರವನ್ನು ತಿಳಿದುಕೊಂಡ ಅನುಸೂಯಾ ಮತ್ತು ಚಂದ್ರಶೇಖರ್ ನಡುವಿನ ಕಲಹ ತೀವ್ರಗೊಂಡಿದ್ದು, ಇದೇ ಹಿನ್ನೆಲೆ ತಡರಾತ್ರಿ ಉಸಿರುಗಟ್ಟಿಸಿ ಕೊಲೆಗೈದಿರುವುದು ತನಿಖೆಯಲ್ಲಿ ತಿಳಿದುಬಂದಿದೆ. ಕೊಲೆಗೆ ಆರ್ಥಿಕ ಲಾಭ, ಸಹಾನುಭೂತಿ ಆಧಾರಿತ ಸರ್ಕಾರಿ ಉದ್ಯೋಗ ಪಡೆಯುವ ಉದ್ದೇಶ ಸೇರಿದಂತೆ ವಿವಿಧ ಕಾರಣಗಳು ಇರಬಹುದೆಂಬ ಅನುಮಾನ ವ್ಯಕ್ತವಾಗಿದ್ದು, ಆ ದಿಕ್ಕಿನಲ್ಲಿ ಪೊಲೀಸರು ಹೆಚ್ಚಿನ ತನಿಖೆ ಮುಂದುವರಿಸಿದ್ದಾರೆ.

ಘಟನೆ ಸಂಬಂಧ ಚಿಕ್ಕನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಾಗಿದ್ದು, ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವ ಕ್ರಮ ಕೈಗೊಳ್ಳಲಾಗಿದೆ. ಪ್ರಕರಣದ ಹಿನ್ನಲೆ, ನಿಖರ ಕಾರಣಗಳು ಮತ್ತು ಇನ್ನಷ್ಟು ಅಂಶಗಳನ್ನು ಪತ್ತೆಹಚ್ಚಲು ಪೊಲೀಸರು ತನಿಖೆಯನ್ನು ಮುಂದುವರಿಸಿದ್ದಾರೆ.

## ಮರದಲ್ಲಿ ನೇತಾಡುತ್ತಿದ್ದ ತಲೆ ಬುರುಡೆಯೊಂದು ಪತ್ತೆ



**ದೊಡ್ಡಬಳ್ಳಾಪುರ :** ಹೊಂಗೆ ಮರದಲ್ಲಿ ನೇತಾಡುತ್ತಿದ್ದ ತಲೆ ಬುರುಡೆಯೊಂದು ಪತ್ತೆಯಾಗಿದ್ದು, ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ದೊಡ್ಡಬಳ್ಳಾಪುರ ತಾಲೂಕಿನ ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶದ ಬ್ಯಾಂಕ್ ಸರ್ಕಲ್ ಬಳಿಯ ರೆಸೋನೆನ್ಸ್ ಲ್ಯಾಬೋರೇಟರಿಸ್ ಪ್ರೈ.ಲಿ ಅವರಣದಲ್ಲಿ ಹೊಗೆ ಮರದಲ್ಲಿ ಅಸ್ತಿ ಪಂಜರದ ಸ್ಥಿತಿಯಲ್ಲಿ ಶವ ಪತ್ತೆಯಾಗಿದೆ. ಸ್ಥಳಕ್ಕೆ ಗ್ರಾಮಾಂತರ ಪೊಲೀಸ್ ಇನ್ಸ್ ಪೇಕ್ಟರ್ ಸಾಧಿಕ್ ಪಾಷಾ ಮತ್ತು ಪೊಲೀಸ್ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

5 ತಿಂಗಳ ಹಿಂದೆ ಆತ್ಮಹತ್ಯೆ ಮಾಡಿಕೊಂಡಿರುವ ಸಾಧ್ಯತೆ ಇದ್ದು, ಪ್ಯಾಕ್ಟ-ರಿಯು 8 ಎಕರೆ ವಿಶಾಲವಾದ ಅವರಣವನ್ನ ಹೊಂದಿದ್ದು, ಆತ್ಮಹತ್ಯೆ ಮಾಡಿಕೊಂಡಿರುವುದು ಬೆಳಕಿಗೆ ಬಂದಿರುವದಿಲ್ಲ, ಗಮನಕ್ಕೆ ಬರದ ಹಿನ್ನಲೆ ಶವ ಸಂಪೂರ್ಣ ಕೊಳೆತು ಅಸ್ತಿಪಂಜರವಾಗಿದೆ, ತಲೆಯ ಭಾಗ ಮಾತ್ರ ಮರದಲ್ಲಿ ನೇತಾಡುತ್ತಿದ್ದು, ಕೆಳಗೆ ದೇಹದ ಇತರ ಭಾಗದ ಮೂಳೆಗಳು ಸಿಕ್ಕಿದೆ.

ಮೃತ ವ್ಯಕ್ತಿಯ ಗುರುತು ಪತ್ತೆಗಾಗಿ ಪೊಲೀಸರು ವಿಚಾರಣೆ ಆರಂಭಿಸಿದ್ದಾರೆ, ಮೃತನು ಪ್ಯಾಕ್ಟರಿ ನೌಕರನಾ ಅಥವಾ ಹೊರಗಿನ ವ್ಯಕ್ತಿಯಾ, ಮೇಲ್ನೋಟಕ್ಕೆ ಆತ್ಮಹತ್ಯೆಯಂತೆ ಕಂಡು ಬಂದರು, ಸಂಪೂರ್ಣ ತನಿಖೆಯ ನಂತರ ಪ್ರಕರಣದ ಸತ್ಯಾಂಶ ಬೆಳಕಿಗೆ ಬರಲಿದೆ.

## ಹುಲಿ ಸಾವು ಕೇಸ್: ಉರುಳು ಹಾಕಿದ್ದ ಆರೋಪಿ ಅರೆಸ್ಟ್



**ಚಾಮರಾಜನಗರ:** ಜಿಲ್ಲೆಯ ಬಿಳಿಗಿರಿ ಹುಲಿ ಸಂರಕ್ಷಿತಾರಣ್ಯದ ಕೊಳ್ಳೇಗಾಲ ವಲಯದಲ್ಲಿ ಇತ್ತೀಚೆಗೆ ಉರುಳಿಗೆ ಸಿಲುಕಿ ಸಾವನ್ನಪ್ಪಿದ್ದ ಹುಲಿ ಪ್ರಕರಣದಲ್ಲಿ ಮಹತ್ವದ ಬೆಳವಣಿಗೆ ಕಂಡುಬಂದಿದ್ದು, ಉರುಳು ಹಾಕಿದ್ದ ಆರೋಪಿಯನ್ನು ಅರಣ್ಯಾಧಿಕಾ-ರಿಗಳು ಬಂಧಿಸಿದ್ದಾರೆ. ಕೊಳ್ಳೇಗಾಲ ತಾಲೂಕಿನ ಕೊಂಗರಹಳ್ಳಿ ಗ್ರಾಮದ ಕುಮಾರ್ (35) ಬಂಧಿತ ಆರೋಪಿ ಬೇಟೆಗಾರನಾಗಿದ್ದು, ವನ್ಯಜೀವಿ ಬೇಟೆಯ ಉದ್ದೇಶದಿಂದಲೇ ಉರುಳು ಹಾಕಿದ್ದಾನೆ ಎಂಬುದು ತನಿಖೆಯಲ್ಲಿ ತಿಳಿದುಬಂದಿದೆ. ಈ ಸಂಬಂಧ ಕೊಳ್ಳೇಗಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಹೆಚ್ಚಿನ ತನಿಖೆ ಮುಂದುವರಿಸಲಾಗಿದೆ.

ಗುಂಡಾಲ್ ಜಲಾಶಯದಲ್ಲಿ ಬೃಹದಾಕಾರದ ಗಂಡು ಹುಲಿಯ ಮೃತದೇಹ ತೇಲುತ್ತಿರುವುದು ಕಂಡುಬಂದಿತ್ತು. ಮಾಹಿತಿ ತಿಳಿದು ಸ್ಥಳಕ್ಕೆ ಧಾವಿಸಿದ ಬಿಳಿಗಿರಿ ಟೈಗರ್ ರಿಸರ್ವ್ ಅರಣ್ಯ ಸಿಬ್ಬಂದಿ ಪರಿಶೀಲನೆ ನಡೆಸಿ ಪ್ರಾಥಮಿಕ ತನಿಖೆ ಕೈಗೊಂಡಿದ್ದರು. ಪರಿಶೀಲನೆ ವೇಳೆ ಹುಲಿಯ ಕತ್ತಿಗೆ ಉರುಳು ಸಿಲುಕಿದ್ದು, ಅದ-ರಿಂದ ತಪ್ಪಿಸಿಕೊಳ್ಳಲು ಪರದಾಡಿದ ಬಳಿಕ ದಾಹ ನೀಗಿಸಲು ಜಲಾಶಯದತ್ತ ಬಂದಾಗ ನೀರಿಗೆ ಬಿದ್ದು ಸಾವನ್ನಪ್ಪಿರುವುದು ಬೆಳಕಿಗೆ ಬಂದಿತ್ತು. ಮರಣೋತ್ತರ ಪರೀಕ್ಷೆಯಲ್ಲಿ ಹುಲಿಯ ಶ್ವಾಸಕೋಶದಲ್ಲಿ ನೀರು ಸಂಗ್ರಹವಾಗಿರುವುದು ದೃಢಪಟ್ಟಿದ್ದು, ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಸಾಧ್ಯತೆ ಹೆಚ್ಚಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆ ನಡೆದ ಪ್ರದೇಶದ ಸುತ್ತಮುತ್ತ ಕೃಷಿ ಜಮೀನುಗಳಿದ್ದು, ಕಾಡು ಹಂದಿಗಳು ಬೆಳೆಗಳನ್ನು ಹಾನಿಗೊಳಿಸುತ್ತಿರುವ ಕಾರಣ ಕೆಲ ರೈತರು ಅವುಗಳನ್ನು ತಡೆಯಲು ಬೈಕ್ ಕ್ಲಚ್ ಕೇಬಲ್ ಬಳಸಿ ಉರುಳುಗಳನ್ನು ಸಿದ್ಧಪಡಿಸಿ ಬೇಲಿ ಬಳಿ ಹಾಕುವ ಪ್ರವೃತ್ತಿ ಇದೆ ಎಂದು ತಿಳಿದುಬಂದಿದೆ. ಇದೇ ರೀತಿಯ ಉರುಳಿಗೆ ಆಹಾರ ಅರಸಿ ಬಂದಿದ್ದ ಹುಲಿ ಸಿಲುಕಿ ನರಳಾಡಿ, ನಂತರ ಜಲಾಶಯದಲ್ಲಿ ಬಿದ್ದು ಪ್ರಾಣ ಕಳೆದುಕೊಂಡಿರುವುದು ತನಿಖೆಯಲ್ಲಿ ಬಹಿರಂಗವಾಗಿದೆ.

ಮೃತ ಹುಲಿ ಸುಮಾರು 6 ವರ್ಷದ ಗಂಡು ಹುಲಿಯಾಗಿದ್ದು, ಸುಮಾರು 150 ಕೆಜಿಯಷ್ಟು ತೂಕ ಹೊಂದಿತ್ತು ಎಂದು ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಅಧಿಕಾರಿಗಳು ಉರುಳು ಹಾಕಿದವರ ಪತ್ತೆಗೆ ವಿಶೇಷ ತಂಡ ರಚಿಸಿ ಶೋಧ ಕಾರ್ಯ ನಡೆಸಿದ್ದರು. ತನಿಖೆಯ ಭಾಗವಾಗಿ ಬೈಕ್ ಕ್ಲಚ್ ವೈರ್ ಬಳಸಿ ಉರುಳು ಹಾಕಿದ್ದ ಆರೋಪದಲ್ಲಿ ಕುಮಾರ್ ಅನ್ನು ಬಂಧಿಸಲಾಗಿದೆ.

ಆದರೆ ಈ ಕೃತ್ಯದಲ್ಲಿ ಕುಮಾರ್ ಒಬ್ಬನೇ ಅಲ್ಲದೆ ಇನ್ನೂ ಕೆಲವರು ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದ್ದು, ಅವರ ಪತ್ತೆಗಾಗಿ ಅರಣ್ಯಾಧಿಕಾರಿಗಳು ಹಾಗೂ ಪೊಲೀಸರು ಸಂಯುಕ್ತವಾಗಿ ತನಿಖೆ ಮುಂದುವರೆಸಿದ್ದಾರೆ. ವನ್ಯಜೀವಿ ಸಂರಕ್ಷಿತ ಪ್ರದೇಶದಲ್ಲಿ ಈ ರೀತಿಯ ಅಕ್ರಮ ಬೇಟೆ ಚಟುವಟಿಕೆಗಳು ಪರಿಸರ ಸಮತೋಲನಕ್ಕೆ ಗಂಭೀರ ಧಕ್ಕೆ ಉಂಟುಮಾಡುತ್ತವೆ ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದು, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

## ಕುಶನ್ ಶಾಪನಲ್ಲಿ ಅಗ್ನಿ ಅವಘಡ, ತಪ್ಪಿದ ಬಾರಿ ಅನಾಹುತ



**ಧಾರವಾಡ:**ತಡ ರಾತ್ರಿ ಕುಶನ್ ಶಾಪನಲ್ಲಿ ಅಗ್ನಿ ಅವಘಡ, ತಪ್ಪಿದ ಬಾರಿ ಅನಾಹುತ.... ಬೆಂಕಿ ನಂದಿಸಿದ ಅಗ್ನಿ ಶಾಮಕದಳದ ಸಿಬ್ಬಂದಿ ನಿಟ್ಟುಸಿರು ಬಿಟ್ಟ ಸ್ಥಳೀಯರು.

ಕುಶನ್ ವರ್ಕ ಅಡುತ್ತಿದ್ದ ಅಂಗಡಿಗೆ ಏಕಾಏಕಿ ಬೆಂಕಿ ತಗುಲಿ ಹೊತ್ತಿ ಉರಿದಿರುವ ಪರಿಣಾಮ ಅಂಗಡಿಯಲ್ಲಿದ್ದ ಬಹುತೇಕ ಕುಶಮ್ ಸಾಮಗ್ರಿಗಳು ಸುಟ್ಟುಕರಕಲಾದ ಘಟನೆ ಧಾರವಾಡದಲ್ಲಿ ಕಚಿಳೆದ ದಿನ ತಡ ರಾತ್ರಿ ಹಳಿಯಾಳ ನಾಕಾ ಬಳಿ ನಡೆದಿದ್ದು, ಅಗ್ನಿ ಶಾಮಕದಳದ ಸಿಬ್ಬಂದಿ ಕಾರ್ಯದಿಂದ ಬಾರಿ ಅನಾಹುತ ತಪ್ಪಿದೆ.

ಧಾರವಾಡದ ಹಳಿಯಾಳ ನಾಕಾ ಟಿವಿ ಟವರ್ ಬಳಿಯ ಕರ್ನಾಟಕ ಕುಶನ್ ವರ್ಕ್ ಶಾಮನಲ್ಲಿ ಈ ಅಗ್ನಿ ಅವಘಡ ನಡೆದಿದೆ. ಮುಜ್ಜಾಮಿಲ್ ಎಂಬವರಿಗೆ ಸೇರಿದ ಶಾಪ ಇದ್ದಾಗಿದ್ದು, ಅಂಗಡಿ ಬಂದ್ ಇದ್ದ ವೇಳೆ ತಡ ರಾತ್ರಿ ಅಂಗಡಿಯಲ್ಲಿ ಮೊದಲಿಗೆ ಹೊಗೆ ಕಾಣಿಸಿಕೊಂಡಿದೆ. ಸಮಯ ಕಳೆಯುತ್ತಿದಂತೆ ಹೊಗೆ ಜತೆಗೆ ಬೆಂಕಿಕಾಣಿಸಿಕೊಂಡ ಕೂಡಲೇ ಸ್ಥಳೀಯರು ಅಗ್ನಿ ಶಾಮಕದಳಕ್ಕೆ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ದೌಡಾಯಿಸಿದ ಅಗ್ನಿ ಶಾಮಕ ದಳದ ಸಿಬ್ಬಂದಿಯವರು ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಇದೇ ಅಂಗಡಿ ಅಕ್ಕ ಪಕ್ಕದ ಹೋಟೆಲ್ ಸೇರಿದಂತೆ ಇನ್ನಿತರ ಶಾಪಗಳಿದ್ದು, ಬೆಂಕಿ ಅವುಗಳಿಗೆ ವ್ಯಾಪಿಸುವ ಮುನ್ನವೆ ಬೆಂಕಿ ನಂದಿದ್ದು, ಬಾರಿ ಅನಾಹುತವೊಂದು ತಪ್ಪಿದಂತಾಗಿದೆ. ಬೆಂಕಿಯಿಂದ ಅಂಗಡಿಯಲ್ಲಿ ಹಾನಿಯಾದ ಕುರಿತು ಪೊಲೀಸ್ ಪ್ರಾಥಮಿಕತನಿಖೆಯ ಬಳಿಕ ತಿಳಿದು ಬರಬೇರಕಾಗಿದೆ. ಉಪನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ದುರ್ಘಟನೆ ನಡೆದಿದೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ:9538786812/8217606793

## ನಾಡಬಾಂಬ್ ಸ್ಫೋಟ: ಮೇಯುತ್ತಿದ್ದ ಹಸುವಿನ ಬಾಯಿ ಛಿದ್ರಛಿದ್ರ



**ಮಂಡ್ಯ:** ಮದ್ದೂರು ತಾಲೂಕಿನ ಹರಳಹಳ್ಳಿ ಗ್ರಾಮದಲ್ಲಿ ಮನಸ್ಸು ಕಲುಕುವಂತಹ ಅಮಾನವೀಯ ಘಟನೆ ಬೆಳಕಿಗೆ ಬಂದಿದ್ದು, ಕಾಡು ಹಂದಿ ಬೇಟೆಗೆ ಅಕ್ರಮವಾಗಿ ಇಡಲಾಗಿದ್ದ ನಾಡಬಾಂಬ್ ಸ್ಫೋಟಗೊಂಡ ಪರಿಣಾಮ ಮೇಯುತ್ತಿದ್ದ ಹಸುವೊಂದು ಗಂಭೀರವಾಗಿ ಗಾಯಗೊಂಡಿದೆ. ದುಷ್ಕರ್ಮಿಗಳ ನಿರ್ಲಕ್ಷ್ಯ ಹಾಗೂ ಅಕ್ರಮ ಬೇಟೆ ಚಟುವಟಿಕೆಗಳಿಂದ ನಿರಪರಾಧ ಪ್ರಾಣಿಯೊಂದು ಭೀಕರವಾಗಿ ನರಳಬೇಕಾದ ಪರಿಸ್ಥಿತಿ ಉಂಟಾಗಿದೆ.

ಹರಳಹಳ್ಳಿ ಗ್ರಾಮದ ಹೊರವಲಯದಲ್ಲಿರುವ ಜಮೀನಿನಲ್ಲಿ ರಾಜಮ್ಮಣಿ ಎಂಬುವವರಿಗೆ ಸೇರಿದ ಹಸು ಸಾಮಾನ್ಯವಾಗಿ ಹುಲ್ಲು ಮತ್ತು ಎಲೆಗಳನ್ನು ಮೇಯುತ್ತಾ ಸುತ್ತಾಡುತ್ತಿತ್ತು. ಈ ವೇಳೆ ಕಾಡು ಹಂದಿಗಳ ಬೇಟೆಗೆ ಉದ್ದೇಶಿಸಿ ಕೆಲವರು ಜಮೀನಿನಲ್ಲೇ ಹುಲ್ಲಿನ ನಡುವೆ ನಾಡಬಾಂಬ್ ಇಟ್ಟು ಹೋಗಿರುವುದು ತಿಳಿದುಬಂದಿದೆ. ಹುಲ್ಲು ಎಂದು ಭಾವಿಸಿ ಹಸು ಅದನ್ನು ಕಚ್ಚಿದ ಕ್ಷಣವೇ ಭಾರೀ ಸ್ಫೋಟ ಸಂಭವಿಸಿ ದಾರುಣ ಪರಿಸ್ಥಿತಿ ನಿರ್ಮಾಣವಾಗಿದೆ.

ಸ್ಫೋಟದ ಪರಿಣಾಮ ಹಸುವಿನ ಬಾಯಿ ಸಂಪೂರ್ಣವಾಗಿ ಛಿದ್ರಛಿದ್ರವಾಗಿದ್ದು, ದವಡೆ, ನಾಲಿಗೆ ಹಾಗೂ ಬಾಯಿಯ ಒಳಭಾಗ ಗಂಭೀರವಾಗಿ ಹಾನಿಗೊಂಡಿದೆ. ಭಾರೀ ರಕ್ತಸ್ರಾವದಿಂದ ಹಸು ತೀವ್ರ ನೋವಿನಲ್ಲಿ ನರಳಾಡಿದ ದೃಶ್ಯ ಸ್ಥಳೀಯರ ಮನಸ್ಸನ್ನು ಕಲುಕುವಂತಿತ್ತು. ಘಟನಾ ಸ್ಥಳದಲ್ಲಿ ರಕ್ತ ಚೆಲ್ಲಾಪಿಲ್ಲಿಯಾಗಿ ಹರಿದಿದ್ದು, ಹಸುವಿನ ಸ್ಥಿತಿ ಕಂಡ ಮಾಲೀಕರಾದ ರಾಜಮ್ಮಣಿ ಕಣ್ಣೀರು ಹಾಕುತ್ತಾ ಆಕ್ರಂದನ ವ್ಯಕ್ತಪಡಿಸಿದ್ದಾರೆ. “ಹುಲ್ಲು ತಿಂದು ಬದುಕುತ್ತಿದ್ದ ನಮ್ಮ ಹಸು ಈ ರೀತಿಯಾಗಿ ಗಾಯಗೊಳ್ಳುತ್ತದೆ ಎಂದು ಕನಸಲ್ಲಿಯೂ ಊಹಿಸಲಿಲ್ಲ” ಎಂದು ಅವರು ದುಃಖ ವ್ಯಕ್ತಪಡಿಸಿದ್ದಾರೆ.

ಘಟನೆಯ ಮಾಹಿತಿ ತಿಳಿದು ಗ್ರಾಮಸ್ಥರು ತಕ್ಷಣ ಸ್ಥಳಕ್ಕೆ ಧಾವಿಸಿ ಹಸುವಿಗೆ ಪ್ರಾಥಮಿಕ ಚಿಕಿತ್ಸೆ ನೀಡಲು ಪ್ರಯತ್ನಿಸಿದರು. ಬಳಿಕ ಪಶುವೈದ್ಯರನ್ನು ಕರೆಸಿ ತುರ್ತು ಚಿಕಿತ್ಸೆ ಒದಗಿಸಲಾಯಿತು. ಆದರೆ ಗಾಯಗಳ ತೀವ್ರತೆಯಿಂದ ಹಸುವಿನ ಸ್ಥಿತಿ ಗಂಭೀರವಾಗಿದ್ದು, ಮುಂದಿನ ಚಿಕಿತ್ಸೆ ಅಗತ್ಯವಿದೆ ಎಂದು ವೈದ್ಯರು ತಿಳಿಸಿದ್ದಾರೆ.

ಸ್ಥಳೀಯರ ಮಾಹಿತಿ ಮೇರೆಗೆ ಕೆ.ಎಂ. ದೊಡ್ಡಿ ಪೊಲೀಸ್ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಅಕ್ರಮವಾಗಿ ನಾಡಬಾಂಬ್ ಇಟ್ಟವರ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ಆರಂಭಿಸಿದ್ದಾರೆ. ಕಾಡು ಹಂದಿಗಳ ಹಾವಳಿಯನ್ನು ತಡೆಯುವ ನೆಪದಲ್ಲಿ ಈ ರೀತಿಯ ಅಪಾಯಕಾರಿ ಸ್ಫೋಟಕಗಳನ್ನು ಬಳಸುವುದು ಮಾನವ ಹಾಗೂ ಪಶುಗಳ ಜೀವಕ್ಕೆ ದೊಡ್ಡ ಅಪಾಯವಾಗಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹ ಗ್ರಾಮಸ್ಥರಿಂದ ಕೇಳಿಬಂದಿದೆ.

## ಜೆಡಿಎಸ್ ಹಿರಿಯ ಮುಖಂಡ ಮಾಜಿ ಜಿ.ಪಂ ಸದಸ್ಯ ರಂಗನಾಥಪುರ ನಾಗರಾಜು (70) ಇನ್ನಿಲ್ಲ



**ಕೃಷ್ಣರಾಜಪೇಟೆ:** ತಾಲೂಕಿನ ಬೂಕನಕೆರೆ ಹೋಬಳಿಯ ರಂಗನಾಥಪುರ ಗ್ರಾಮದ ನಿವಾಸಿ ಜನತಾದಳ (ಜಾತ್ಯತೀತ) ಪಕ್ಷದ ಹಿರಿಯ ಮುಖಂಡರು ಹಾಗೂ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ರಂಗನಾಥಪುರ ನಾಗರಾಜು (70) ಅವರು ಇಂದು ಸಂಜೆ ಹೃದಯಾಘಾತದಿಂದ ನಿಧನ ಹೊಂದಿದ್ದಾರೆ,

ಮೃತರು ಪತ್ನಿ, ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಬಿಟ್ಟು ಅಗಲಿದ್ದಾರೆ,ರಾಜಕೀಯ ಮಾತ್ರವಲ್ಲದೆ ಸಹಕಾರಿ ಕ್ಷೇತ್ರದಲ್ಲಿಯೂ ಸಕ್ರಿಯರಾಗಿದ್ದ ನಾಗರಾಜು ಅವರು ತಾಲೂಕು ಕೃಷಿ ಉತ್ಪನ್ನ ಮಾರಾಟ ಸಹಕಾರ ಸಂಘದ (ಟಿಎಪಿಸಿಎಂಎಸ್)ಸತತವಾಗಿ ಮೂರು ಬಾರಿ ನಿರ್ದೇಶಕರಾಗಿ ಆಯ್ಕೆಯಾಗಿದ್ದರು, ಬೂಕನಕೆರೆ ಹೋಬಳಿ ಭಾಗದಲ್ಲಿ ಜೆಡಿಎಸ್ ಪಕ್ಷದ ಬಲವರ್ಧನೆಗೆ ಅವರು ಮಹತ್ತರ ಕೊಡುಗೆ ನೀಡಿದ್ದರೆ,

ನಾಗರಾಜು ಅವರ ನಿಧನಕ್ಕೆ ಶಾಸಕರು, ಮಾಜಿ ಶಾಸಕರು, ಹಾಲಿ-ಮಾಜಿ ಸಚಿವರು, ಹಾಗೂ ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಸಮಾಜ ಸೇವಕರು, ತೀವ್ರ ಸಂತಾಪ ಸೂಚಿಸಿದ್ದಾರೆ, ತಾಲೂಕಿನಲ್ಲಿ ಒಬ್ಬ ಹಿರಿಯ ಮಾರ್ಗದರ್ಶಕ ಹಾಗೂ ನಿಷ್ಠಾವಂತ ಹೋರಾಟಗಾರನನ್ನು ಕಳೆದುಕೊಂಡಿದೆ ಎಂದು ಗಣ್ಯರು ಕಂಬನಿ ಮಿಡಿದಿದ್ದಾರೆ,

ಮೃತರ ಅಂತ್ಯಕ್ರಿಯೆಯು ಸ್ವಗ್ರಾಮ ರಂಗನಾಥಪುರ ಗ್ರಾಮದ ಅವರ ಸ್ವಂತ ಜಮೀನಿನಲ್ಲಿ ಶನಿವಾರ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ,

## ಶಿವಾಜಿ ಭಾವಚಿತ್ರ ಮೆರವಣಿಗೆ ವೇಳೆ ಕಲ್ಲು ಚಪ್ಪಲಿ ತೂರಾಟ



**ಬಾಗಲಕೋಟೆ:** ನಗರದಲ್ಲಿ ಶಿವಾಜಿ ಜಯಂತಿ ಭಾವಚಿತ್ರ ಮೆರವಣಿಗೆ ವೇಳೆ ನಡೆದ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ್ ಗೋಯಲ್ ಪ್ರತಿಕ್ರಿಯೆ ನೀಡಿದ್ದು, ಘಟನೆಯ ಕುರಿತ ಎಲ್ಲಾ ಮಾಹಿತಿಯನ್ನು ಎಳೆ ಎಳೆಯಾಗಿ ಬಿಚ್ಚಿಟ್ಟಿದ್ದಾರೆ. ಬುಧವಾರ ಸಂಜೆ ನಡೆದ ಈ ಘಟನೆಯ ಹಿನ್ನೆಲೆ 8 ಆರೋಪಿಗಳನ್ನು ಪೊಲೀಸರು ಈಗಾಗಲೇ ಬಂಧಿಸಿದ್ದು, ತನಿಖೆ ನಡೆಸಿದ್ದಾರೆ. ಈ ವೇಳೆ ಹೊರಬಂದ ಸತ್ಯವನ್ನು ಎಸ್ಪಿ ಮಾಧ್ಯಮದ ಮುಂದಿಟ್ಟಿದ್ದಾರೆ.

**8 ಆರೋಪಿಗಳ ಬಂಧನ:** ಶಿವಾಜಿ ಜಯಂತಿಯ ಮೆರವಣಿಗೆ ವೇಳೆ ಕಲ್ಲು ತೂರಾಟ ನಡೆಸಿದ್ದ ನವನಗರ ನಿವಾಸಿ ತನ್ವೀರ್ ಬಂಧಿಸಲಾಗಿದ್ದು, ಸುಮೋಟೋ ಕೇಸ್ ದಾಖಲಿಸಿಕೊಂಡು ಈಋಖ ಮಾಡಿದ್ದೇವೆ ಎಂದು ಎಸ್ಪಿ ಸಿದ್ಧಾರ್ಥ್ ಹೇಳಿಕೆ ನೀಡಿದ್ದಾರೆ. ಸಿಸಿಟಿವಿ ದೃಶ್ಯ ಪರಿಶೀಲಿಸಿ 8 ಆರೋಪಿಗಳನ್ನು ಬಂಧಿಸಲಾಗಿದ್ದು, ತನ್ವೀರ್‌ನನ್ನು ಹೊರತುಪಡಿಸಿ ಬೇರೆ ಯಾರೂ ಕಲ್ಲು ತೂರಾಟ ಮಾಡಿಲ್ಲವೆಂದು ಆತನೇ ಒಪ್ಪಿಕೊಂಡಿರುವುದಾಗಿ ಎಸ್ಪಿ ಹೇಳಿದ್ದಾರೆ.

ಈ ಗಲಾಟೆ ಪೂರ್ವ ಯೋಜಿತವಾಗಿದ್ದಲ್ಲ ಮತ್ತು ಡಿಜೆ ವಿಚಾರಕ್ಕಾಗಿಯಾಗಿ ಕಲ್ಲು ತೂರಾಟ ನಡೆದಿಲ್ಲ. ರಾತ್ರಿ ಸುಮಾರು 10 ಗಂಟೆ 6 ನಿಮಿಷಕ್ಕೆ ಕಲ್ಲು ತೂರಾಟವಾಗಿದ್ದು, ಈ ವೇಳೆ ನನಗೆ ಮತ್ತು ಇಬ್ಬರು ಕಾನ್ಸ್‌ಟೇಬಲ್‌ಗಳಿಗೆ ಗಾಯಗಳಾಗಿವೆ ಎಂದು ಎಸ್ಪಿ ತಿಳಿಸಿದ್ದಾರೆ. ಕಲ್ಲು ತೂರಾಟದ ಜೊತೆ ಚಪ್ಪಲಿಯನ್ನು ಕೂಡ ಎಸೆಯಲಾಗಿದೆ. ಮಸೀದಿ ಒಳಗೆ ಕಲ್ಲಿನಿಂದ ಶೂ ಯಾರ್ಕ್ ಮಾಡಲಾಗಿತ್ತು. ಅದೇ ಯಾರ್ಕ್ನ ಕಲ್ಲು ತೆಗೆದುಕೊಂಡು ತೂರಾಟ ನಡೆಸಲಾಗಿದೆ. ಮಸೀದಿಯೊಳಗೆ ಯಾವುದೇ ರಾಡ್ ಆಗಲಿ ಬೇರೆ ಅಸ್ತ್ರವಾಗಲಿ ಇರಲಿಲ್ಲ. ಗಲಾಟೆ ಹಿನ್ನೆಲೆ ಬಿಎನ್‌ಎಸ್ 163ರಡಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದು ಬಾಗಲಕೋಟೆ ಎಸ್‌ಪಿ ಸಿದ್ಧಾರ್ಥ ಗೋಯಲ್ ಹೇಳಿದ್ದಾರೆ.



**ಘಟನೆಯ ವಿವರ: ಸಂಜೆ 5ಗಂಟೆ: ಕೊತ್ತಲೇಶ್ವರ ದೇವಸ್ಥಾನದಿಂದ ಶಿವಾಜಿ ಭಾವಚಿತ್ರ ಮೆರವಣಿಗೆ ಆರಂಭ.**

**9.45: ವಲ್ಲಭಭಾಯಿ ವೃತ್ತ,ಬಸವೇಶ್ವರ ಮಾರ್ಗವಾಗಿ ಪಂಕಾ ಮಸೀದಿ ಬಳಿ ಮೆರವಣಿಗೆ ಆಗಮನ**

**9.50: ಮಸೀದಿ ಪ್ರಾರ್ಥನೆಗೆ ಬಂದಿದ್ದವರಿಂದ ಸೌಂಡ್ ಬಗ್ಗೆ ತಕರಾರು. ಪ್ರಚೋಧನಾತ್ಮಕ ಮಾತು,ಸ್ಥಳದಲ್ಲಿ ಪೊಲೀಸರಿಂದ ಸಮಾಧಾನ ಯತ್ನ**

**10 ಗಂಟೆಗೆ: ಕಲ್ಲು ತೂರಾಟ, ಎಸ್ ಪಿ ಸಿದ್ದಾರ್ಥ ಗೋಯೆಲ್ ಹಾಗೂ ಓರ್ವ ಕಾನ್ಸ್ಟೇಬಲ್, ಓರ್ವ ಹಿಂದು ಕಾರ್ಯಕರ್ತನಿಗೆ ಗಾಯ**

**10.15ರಿಂದ: ಹಿಂದು ಕಾರ್ತಕರ್ತರ ಬೃಹತ್ ಪ್ರತಿಭಟನೆ. ತಡೆಯಲು ಬಂದ ಪೊಲೀಸರ ಜೊತೆ ವಾಗ್ವಾದ.ಕಿಡಿಗೇಡಿಗಳ ಬಂಧನಕ್ಕೆ ಆಗ್ರಹ.**

**11 ಗಂಟೆ: ಕೊತ್ತಲೇಶ್ವರ ದೇವಸ್ಥಾನದ ಎದುರು ಹಿಂದು ಮುಖಂಡರ ಪ್ರತಿಭಟನೆ.**

**12 ಗಂಟೆ: ಎಲ್ಲರನ್ನು ಸ್ಥಳದಿಂದ ಕಳುಹಿಸಿದ ಪೊಲೀಸರು.**

**12.25: ತರಕಾರಿ ಮಾರುಕಟ್ಟೆಯಲ್ಲಿನ ನಾಲ್ಕು ತಳ್ಳುಗಾಡಿಗಳಿಗೆ ಬೆಂಕಿ.ಪೊಲೀಸರಿಂದ ಬೆಂಕಿ ಶಮನ.**

**ಹಿಂದೂ ಮುಖಂಡರ ಸಭೆ:** ಶಿವಾಜಿ ಜಯಂತಿ ಮೆರವಣಿಗೆ ವೇಳೆ ನಡೆದ ಕಲ್ಲು ತೂರಾಟ ಪ್ರಕರಣದ ಹಿನ್ನೆಲೆ ಹಿಂದೂ ಮುಖಂಡರ ಸಭೆ ಆಯೋಜಿಸಲಾಗಿತ್ತು. ಸಭೆಯಲ್ಲಿ ಬಿಜೆಪಿ ರಾಜ್ಯಸಭಾ ಸದಸ್ಯ ನಾರಾಯಣಸಾ ಬಾಂಡಗೆ ಮಾತನಾಡಿ,ಯಾರು ಭಾಗಿಯಾಗಿದ್ದಾರೋ ಎಲ್ಲರನ್ನೂ ಬಂಧಿಸಬೇಕು. ನಾಲ್ಕು ಮಂದಿಯನ್ನು ಮಾತ್ರ ಬಂಧಿಸುವುದ-ರಿಂದ ಸಾಲದು. ಪ್ರಕರಣದಲ್ಲಿ ಸಂಪೂರ್ಣವಾಗಿ ತನಿಖೆ ನಡೆಸಿ ಎಲ್ಲಾ ಆರೋಪಿಗಳನ್ನೂ ಕಾನೂನು ಮುಂದಿಡಬೇಕು ಎಂದು ಆಗ್ರಹಿಸಿದ್ದಾರೆ.

**ಸಿಎಂ ಏನಂದ್ರು?:** ಬಾಗಲಕೋಟೆಯಲ್ಲಿ ನಡೆದ ಕಲ್ಲು ತೂರಾಟವನ್ನು ಸಿಎಂ ತೀವ್ರವಾಗಿ ಖಂಡಿಸಿದ್ದಾರೆ. ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿದ ಅವರು, ಘಟನೆ ಶಾಂತಿ ಸೌಹಾರ್ದತೆಗೆ ಮಾರಕ ಎಂದಿದ್ದಾರೆ. ನಿಷ್ಪಕ್ಷಪಾತ ತನಿಖೆಗೆ ಸೂಚನೆ ನೀಡಿದ್ದು, ಆರೋಪಿಗಳನ್ನು ಬಂಧಿಸಲಾಗಿದೆ. ತಪ್ಪಿತಸ್ಥರಿಗೆ ಶಿಕ್ಷೆ ನಿಶ್ಚಿತ ಎಂದು ಎಚ್ಚರಿಸಿ, ಸಾರ್ವಜನಿಕರು ಪ್ರಚೋದನೆಗಳಿಗೆ ಕಿವಿಗೊಡದೆ ಸಂಯಮದಿಂದ ವರ್ತಿಸಬೇಕು ಎಂದು ಮನವಿ ಮಾಡಿದ್ದಾರೆ.

## ಖಾಸಗಿ ಬಸ್-ಬೈಕ್ ನಡುವೆ ಡಿಕ್ಕಿ ಬೈಕ್ ಸವಾರ ಸ್ಥಳದಲ್ಲೇ ಸಾವು



ತುಮಕೂರು ಕಡೆಯಿಂದ ಬೆಂಗಳೂರು ಕಡೆಗೆ ಬರುತ್ತಿದ್ದ ವೇಳೆ ಹಳೆ ನಿಜಗಲ್ ಬಳಿ ಖಾಸಗಿ ಬಸ್ ಹಾಗೂ ಹೀರೋ ಸ್ಪೆಂಡರ್ ಪ್ರೊ ಬೈಕ್ ನಡುವೆ ಅಪಘಾತ ಸಂಭವಿಸಿದೆ. ಈ ಅಪಘಾತದ ಸಂಪೂರ್ಣ ದೃಶ್ಯ ಪೆಟ್ರೋಲ್ ಬಂಕ್ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಬೈಕಿನಲ್ಲಿ ಇಬ್ಬರು ಪ್ರಯಾಣಿಸುತ್ತಿದ್ದ ವೇಳೆ ಖಾಸಗಿ ಬಸ್ ಟಚ್ ಮಾಡಿದ ಪರಿಣಾಮ ಬೈಕ್ ನಿಯಂತ್ರಣ ತಪ್ಪಿ ರಸ್ತೆ ಮೇಲೆ ಬಿದ್ದಿದೆ ಎಂಬುದು ಸಿಸಿಟಿವಿ ದೃಶ್ಯಗಳಲ್ಲಿ ಗೋಚರಿಸುತ್ತದೆ. ಅಪಘಾತದಲ್ಲಿ ಬೈಕಿನ ಹಿಂಬದಿಯಲ್ಲಿ ಕೂತಿದ್ದ ವ್ಯಕ್ತಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಬೈಕ್ ಚಲಾಯಿಸುತ್ತಿದ್ದ ವ್ಯಕ್ತಿಯ ತಲೆಗೆ ಗಂಭೀರವಾಗಿ ಪೆಟ್ಟು ಬಿದ್ದಿದೆ.

ಗಾಯಾಳುವನ್ನು ತಕ್ಷಣವೇ ಖಾಸಗಿ ಆಂಬುಲೆನ್ಸ್ ಮೂಲಕ ಡಾಬಸ್ ಪೇಟೆಯ ಒಜಜುಣುಜಜ ಒಣಟಣು-ಖಿರಿಜಭಿಬಿಚಿಟ-ಏಣಥಿ ಊಠಿರಿಣಚಿಟ ಆಸ್ಪತ್ರೆಗೆ ದಾಖಲಿಸಲಾಗಿದೆ.

ಇನ್ನೊಂದೆಡೆ, ಘಟನೆ ಕುರಿತು ಪ್ರತಿಕ್ರಿಯಿಸಿದ ಬಸ್ ಚಾಲಕ, “ನಾನು ಟಚ್ ಮಾಡಿಲ್ಲ, ಅವರೇ ಬಸ್‌ಗೆ ಟಚ್ ಮಾಡಿಕೊಂಡಿರಬಹುದು, ನನಗೆ ಗೊತ್ತೇ ಇಲ್ಲ” ಎಂದು ಹೇಳಿಕೆ ನೀಡಿದ್ದಾರೆ.

ಸದ್ಯ ಘಟನೆ ಸಂಬಂಧ ಪೊಲೀಸರು ಪರಿಶೀಲನೆ ನಡೆಸುತ್ತಿದ್ದು, ಸಿಸಿಟಿವಿ ದೃಶ್ಯಗಳ ಆಧಾರದ ಮೇಲೆ ತನಿಖೆ ಮುಂದುವ-ರಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಬೈಕ್ ಅಡ್ಡಗಟ್ಟಿ ದಲಿತ ಕ್ರಿಶ್ಚಿಯನ್ ಬಾಲಕನ ಮೇಲೆ ಹಲ್ಲೆ

**ಚಿಕ್ಕಮಗಳೂರು:** ಕಾಫಿನಾಡು ಚಿಕ್ಕಮಗಳೂರಿನಲ್ಲಿ ನೈತಿಕ ಪೊಲೀಸ್ ಗಿರಿ ನಡೆದಿರುವುದು ಬೆಳಕಿಗೆ ಬಂದಿದೆ. ದಲಿತ ಕ್ರಿಶ್ಚಿಯನ್ ಬಾಲಕನೋರ್ವ, ಮುಸ್ಲಿಂ ಯುವತಿಯೊಂದಿಗೆ ಬೈಕ್‌ನಲ್ಲಿ ತೆರಳುತ್ತಿದ್ದಾಗ ಗುಂಪೊಂದು ಅಡ್ಡಗಟ್ಟಿದೆ. ತಮ್ಮ ಸಮುದಾಯದ ಯುವತಿಯನ್ನು ಬೈಕ್ ಮೇಲೆ ಕರೆದುಕೊಂಡು ಹೋಗುತ್ತಿದ್ದಕ್ಕೆ ಮುಸ್ಲಿಂ ಯುವಕರ ತಂಡ ಬೈಕ್ ಅಡ್ಡಗಟ್ಟಿ ಕ್ರಿಶ್ಚಿಯನ್ ಬಾಲಕನ ಮೇಲೆ ಹಲ್ಲೆ ಮಾಡಿದೆ. ಚಿಕ್ಕಮಗಳೂರಿನ ಮಾರ್ಕೆಟ್ ರಸ್ತೆಯಲ್ಲಿ ಈ ಘಟನೆ ನಡೆದಿದ್ದು, ಈ ಸಂಬಂಧ 8 ಯುವಕರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.



ಅಪ್ರಾಪ್ತ ಕ್ರಿಶ್ಚಿಯನ್ ಬಾಲಕ, ಮುಸ್ಲಿಂ ಯುವತಿಯನ್ನು ಬೈಕ್‌ನಲ್ಲಿ ಕರೆದು ಕೊಂಡು ಹೋಗುತ್ತಿದ್ದಾಗ ಚಿಕ್ಕಮಗಳೂರಿನ ಮಾರ್ಕೆಟ್ ರಸ್ತೆಯಲ್ಲಿ ಅಡ್ಡಗಟ್ಟಿದ್ದಾರೆ. ಬಳಿಕ ಕ್ರಿಶ್ಚಿಯನ್ ಬಾಲಕ ಮೇಲೆ ಹಲ್ಲೆ ಮಾಡಿದ್ದಾರೆ. ಇನ್ನು ಈ ಬಗ್ಗೆ ಅಪ್ರಾಪ್ತ ಬಾಲಕನ ಸಹೋದರ ನೀಡಿದ ದೂರಿನನ್ವಯ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ಎಫ್ ಐ ಆರ್ ದಾಖಲಾಗಿದ್ದು, ಇಬ್ಬರನ್ನು ಬಂಧಿಸಲಾಗಿದೆ.

**ಎಸ್ಪಿ ಜಿತೇಂದ್ರ ಕುಮಾರ್ ದಯ್ಯಾ ಹೇಳಿದ್ದಿಷ್ಟು:** ಇನ್ನು ಈ ಪ್ರಕರಣದ ಬಗ್ಗೆ ಚಿಕ್ಕಮಗಳೂರು ಎಸ್ಪಿ ಜಿತೇಂದ್ರ ಕುಮಾರ್ ದಯ್ಯಾ ಪ್ರತಿಕ್ರಿಯಿಸಿದ್ದು, ಬಾಲಕ,ಬಾಲಕಿ ಅಪ್ರಾಪ್ತರು ಬೈಕಿನಲ್ಲಿ ಹೋಗುತ್ತಿದ್ದರು. ಈ ವೇಳೆ ಅಡ್ಡ ಹಾಕಿ ಬೆದರಿಕೆ ಹಾಕಿದ್ದಾರೆ. ಇದು ಮೇಲ್ನೋಟಕ್ಕೆ ನೈತಿಕ ಪೊಲೀಸ್ ಗಿರಿ ಎನ್ನುವುದು ಕಂಡು ಬರುತ್ತಿದೆ. ಇಬ್ಬರು ಯುವಕರು ಬಂದು ಬೈಕ್ ಅಡ್ಡ ಹಾಕಿದ್ದಾರೆ. ಇನ್ನೂ ಕೆಲವರು ಬೆದರಿಕೆ ಹಾಕಿದ್ದಾರೆ. ಅಪ್ರಾಪ್ತ ಬಾಲಕನ ಮನೆಗೆ ತೆರಳಿ ಕೆಲವರು ಹಲ್ಲೆ ಮಾಡಲು ಯತ್ನಿಸಿ ಬೆದರಿಕೆ ಹಾಕಿದ್ದಾರೆ. ಈ ಸಂಬಂಧ ಇಬ್ಬರನ್ನ ಬಂಧನ ಮಾಡಲಾಗಿದ್ದು, ರಾತ್ರಿ, ಹಗಲು ಎರಡು ಪಾಳಿಯಲ್ಲಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ರಂಜಾನ್ ಇರುವುದರಿಂದ ಸಂಪೂರ್ಣ ಭದ್ರತೆ ಮಾಡಲಾಗಿದೆ. ಯಾವುದೇ ನೈತಿಕ ಪೊಲೀಸ್ ಗಿರಿಗೆ ಅವಕಾಶ ನೀಡುವುದಿಲ್ಲ ಎಂದರು.

**60ಕ್ಕೂ ಹೆಚ್ಚು ಜನ ಬಂದಿದ್ರು ಎಂದ ಯುವಕನ ತಾಯಿ:** ಈ ಬಗ್ಗೆ ಯುವಕನ ತಾಯಿ ಪಲ್ಲವಿ ಮಾತನಾಡಿದ್ದು, ಹುಡುಗಿ ಯಾವಾಗಲೂ ನನ್ನ ಮನೆಗೆ ಬರುತ್ತಾಳೆ. ನನಗೆ ಹುಷಾರಿಲ್ಲ ಮನೆಗೆ ಬಿಡು ಎಂದಿದ್ದಾಳೆ.ಆ ಹುಡುಗಿ ನನ್ನ ಅಮ್ಮ ಎಂದು ಕರೆಯುತ್ತಾಳೆ. ಮನೆಗೆ ಬಿಡಲು ಹೋಗುತ್ತಿದ್ದಾಗ ಜ್ಯೋತಿ ಟಾಕೀಸ್ ಬಳಿ 39ಕ್ಕೂ ಹೆಚ್ಚು ಜನರು ಅಡ್ಡ ಹಾಕಿದ್ದಾರೆ. ಮನೆಯ ಬಳಿ ಬನ್ನಿ ಮಾತನಾಡೋಣ ಎಂದು ಕರೆದುಕೊಂಡು ಹೋದೆ. ಆದ್ರೆ, ಮನೆಯ ಬಳಿ 60ಕ್ಕೂ ಹೆಚ್ಚು ಜನ ಬಂದಿದ್ದರು. ಕೆಲವರು ಮಗನ ಮೇಲೆ ಹಲ್ಲೆ ಮಾಡಿದ್ದಾರೆ. ಅನಂತರ ನಾವು ಪೊಲೀಸ್ ಠಾಣೆಗೆ ಬಂದ್ವಿ. ಎಲ್ಲರೂ ಹಲ್ಲೆ ಮಾಡಿಲ್ಲ ಇಬ್ಬರು ಮಾತ್ರ ಹಲ್ಲೆ ಮಾಡಿದ್ದಾರೆ. ನಮ್ಮ ಹುಡುಗ ಮತ್ತು ಹುಡುಗಿಯದ್ದು ಯಾವುದೇ ತಪ್ಪಿಲ್ಲ. ಇವನು ಹಿಂದೂ ಅವಳು ಮುಸ್ಲಿಂ ಎಂದು ಈ ರೀತಿಯಲ್ಲಿ ಮಾಡಿದ್ದಾರೆ. ಹೇಗೆ ಕರೆದುಕೊಂಡು ಬಂದ್ರಿ ಎಂದು ನನ್ನ ಮುಂದೆ ಪ್ರಶ್ನೆ ಮಾಡಿದ್ರು. ನಮ್ಮ ಮತ್ತು ಹುಡುಗಿಯ ನಡುವೆ ಏನು ಇಲ್ಲ. ಮಧ್ಯದಲ್ಲಿ ಇದ್ದವರು ಈ ರೀತಿ ಮಾಡಿದ್ದಾರೆ ಎಂದಿದ್ದಾರೆ.

**ಮುಸ್ಲಿಂ ಮುಖಂಡ ಅಲಿ ಹೇಳಿದ್ದೇನು?:** ಮೂರು ಜನ ಯಾರೋ ತಪ್ಪು ಮಾಡಿದ್ದಾರೆ. ಯಾರೂ ತಪ್ಪು ಮಾಡಿಲ್ಲ ಅಂತಾ ಏನಿಲ್ಲ. ಏರಿಯಾದಲ್ಲೊ ಯಾರೋ ಮನೆಗೆ ನುಗ್ಗಿದ್ದಾರೆಂದು ಬಿಡಿಸಲು ಹೋಗಿದ್ದಾರೆ. ಆವಮ್ಮ ಬಾರಪ್ಪ ಮನೆಯಲ್ಲಿ ಸೆಟಲ್ಮೆಂಟ್ ಮಾಡೋಣ ಅಂತಾ ಕರೆದುಕೊಂಡು ಹೋಗಿದ್ದಾರೆ. ಕರೆದುಕೊಂಡು ಹೋಗಿ ನಮಗೆ ಹೊಡೆಯೋಕೆ ಬಂದಿದ್ರು ಎಂದು ಕೇಸ್ ಮಾಡಿದ್ದಾರೆ. ಯಾಕೆ ಇವನ ಜೊತೆಯಲ್ಲಿ ಹೋಗುತ್ತಿದ್ದೀಯಾ ಅಂತ ಹಿಡಿದಿದ್ದಾರೆ. ಮಾರ್ಕೆಟ್ ರೋಡ್ ನಲ್ಲಿ ಹೋಗುತ್ತಿದ್ದಾಗ ಹಿಡಿದು ಕೇಳಿದ್ದಾರೆ ಅಷ್ಟೇ. ಎಲ್ಲಾದರೂ ಓಡಾಡ್ಲಿ ಅವರಿನ್ನು 7ಣು ಓದುತ್ತಿದ್ದಾರಂತೆ. ಇವರು ಹೊಡೆಯುವುದಕ್ಕೆ ಹೋಗಿಲ್ಲ. ಮನೆಯಲ್ಲಿ ಸೆಟ್ಲ್ಮೆಂಟ್ ಮಾಡೋಣ ಅಂತ ಕರೆದುಕೊಂಡು ಹೋಗಿ ಇಲ್ಲಿ ಬಂದು ಎಲ್ಲರ ಮೇಲೂ ಕೇಸ್ ಫಿಟ್ ಮಾಡಿದ್ದಾರೆ. ನಾಲ್ಕು ಜನರನ್ನು ಮನೆಗೆ ಕರೆದುಕೊಂಡು ಹೋಗಿ ಓಡಿಯೋಕೆ ಬಂದಿದ್ರು ಅಂತ ಕೇಸ್ ಕೊಟ್ಟಿದ್ದಾರೆ ಹೀಗೆ ಮಾಡಬಹುದಾ? ಮಾರ್ಕೆಟ್ ರೋಡ್ ನಲ್ಲಿ ಹೋಗುತ್ತಿದ್ದಾಗ ಹಿಡಿದು ಕೇಳಿದ್ದಾರೆ ಅಷ್ಟೇ. ಇವರನ್ನು ಮನೆಗೆ ಕರೆದುಕೊಂಡು ಹೋಗುವ ಬದಲು ಸ್ಟೇಷನ್ ಗೆ ಕರೆದುಕೊಂಡು ಬರಬಹುದು ಅಲ್ವಾ? ಮನೆಗೆ ಕರೆದುಕೊಂಡು ಹೋಗಿ ಮುಸ್ಲಿಂ ಹುಡುಗರು ಈ ರೀತಿ ಮಾಡಿದ್ದಾರೆ ಅಂದ್ರೆ ಅದು ತಪ್ಪಲ್ವಾ ಎಂದು ಪ್ರಶ್ನಿಸಿದ್ದಾರೆ.

# ಮುಡಾ ಹಗರಣದ ದೂರುದಾರ ಸ್ನೇಹಮಯಿ ಕೃಷ್ಣ ಬಂಧನ



ಬೆಂಗಳೂರು ನಗರದಲ್ಲಿ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಬಂಧನ ಪ್ರಕರಣ ಮತ್ತಷ್ಟು ಚರ್ಚೆಗೆ ಗ್ರಾಸವಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ನಡೆದ ಹೇಳಿಕೆಗಳು ಹಾಗೂ ಅಧಿಕಾರಿಗಳ ವಿರುದ್ಧ ಮಾಡಲಾದ ಆರೋಪಗಳ ಹಿನ್ನೆಲೆ ಸೈಬರ್ ಕ್ರೈಮ್ ಪೊಲೀಸರು ಕಾನೂನು ಕ್ರಮ ಕೈಗೊಂಡಿದ್ದಾರೆ. ಮುಡಾದ ಮಾಜಿ ಆಯುಕ್ತ ಡಿ.ಬಿ. ನಟೇಶ್ ನೀಡಿದ ದೂರಿನ ಆಧಾರದ ಮೇಲೆ ನಡೆದ ಈ ಬಂಧನ ಪ್ರಕರಣ ಆಡಳಿತ ವಲಯದಲ್ಲೂ ಗಮನ ಸೆಳೆಯುತ್ತಿದೆ.

ಸ್ನೇಹಮಯಿ ಕೃಷ್ಣ ಇತ್ತೀಚೆಗೆ ಸಾರ್ವಜನಿಕ ವೇದಿಕೆಗಳು ಮತ್ತು ಸಾಮಾಜಿಕ ಜಾಲತಾಣಗಳ ಮೂಲಕ ಡಿ.ಬಿ. ನಟೇಶ್ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದರು. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಸುಮಾರು ಒಂದೂವರೆ ಕೋಟಿ ರೂಪಾಯಿ ಹಣ ನೀಡಿ ಮುಂಬಡ್ತಿ ಪಡೆದಿದ್ದಾರೆ ಎಂದು ಅವರು ಹೇಳಿಕೆ ನೀಡಿದ್ದು, ಈ ಆರೋಪಗಳು ವೇಗವಾಗಿ ಹರಡಿ ರಾಜಕೀಯ ಹಾಗೂ ಆಡಳಿತ ವಲಯದಲ್ಲಿ ಚರ್ಚೆಗೆ ಕಾರಣವಾಗಿದ್ದವು. ಹಲವು ಮಾಧ್ಯಮಗಳಲ್ಲಿ ಈ ವಿಷಯ ಪ್ರಸಾರಗೊಂಡ ಹಿನ್ನೆಲೆಯಲ್ಲಿ ಪ್ರಕರಣಕ್ಕೆ ಹೆಚ್ಚಿನ ಗಮನ ಹರಿಯಿತು.

ಆದರೆ ಈ ಆರೋಪಗಳನ್ನು ಸಂಪೂರ್ಣವಾಗಿ ತಳ್ಳಿ ಹಾಕಿದ ಡಿ.ಬಿ. ನಟೇಶ್, ತಮ್ಮ ಗೌರವ ಮತ್ತು ಸೇವಾ ಜೀವನಕ್ಕೆ ಧಕ್ಕೆ ತರುವ ಉದ್ದೇಶದಿಂದ ಸುಳ್ಳು ಮಾಹಿತಿ ಹಬ್ಬಿಸಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಿದರು. ತಮ್ಮ ವಿರುದ್ಧ ನಿರಾಧಾರ ಆರೋಪಗಳನ್ನು ಮಾಡಿ ಮಾನಹಾನಿಗೆ ಕಾರಣರಾಗಿದ್ದಾರೆ ಎಂದು ಅವರು ಆರೋಪಿಸಿದ್ದು, ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರಿಗೆ ಅಧಿಕೃತ ದೂರು ಸಲ್ಲಿಸಿದ್ದರು. ತಪ್ಪು ಮಾಹಿತಿಯನ್ನು ಉದ್ದೇಶಪೂರ್ವಕವಾಗಿ ಹರಡಲಾಗಿದೆ ಎಂದು ದೂರಿನಲ್ಲಿ ವಿವರಿಸಲಾಗಿದೆ.

ದೂರು ಸ್ವೀಕರಿಸಿದ ಬಳಿಕ ಪೊಲೀಸ್ ಆಯುಕ್ತರು ಪ್ರಕರಣವನ್ನು ಸೈಬರ್ ಕ್ರೈಮ್ ವಿಭಾಗಕ್ಕೆ ವರ್ಗಾಯಿಸಿ ಸಮಗ್ರ ತನಿಖೆ ನಡೆಸುವಂತೆ ಸೂಚಿಸಿದರು. ಅದರಂತೆ ಸೈಬರ್ ಕ್ರೈಮ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ, ಸಾಮಾಜಿಕ ಜಾಲತಾಣಗಳಲ್ಲಿ ಹಂಚಲಾದ ಪೋಸ್ಟ್‌ಗಳು, ವಿಡಿಯೋ ಹೇಳಿಕೆಗಳು, ಕಾಮೆಂಟ್‌ಗಳು ಹಾಗೂ ಸಂಬಂಧಿತ ದಾಖಲೆಗಳ ತಾಂತ್ರಿಕ ಪರಿಶೀಲನೆ ಆರಂಭಿಸಲಾಯಿತು. ಮಾಹಿತಿ ಪ್ರಸಾರದ ಮೂಲ, ಅದರ ನಿಜಾಸತ್ಯತೆ ಮತ್ತು ಅದರ ಪರಿಣಾಮಗಳನ್ನು ಅಧಿಕಾರಿಗಳು ವಿಶ್ಲೇಷಣೆ ಮಾಡಿದರು.

ತನಿಖೆಯ ಪ್ರಾಥಮಿಕ ಹಂತದಲ್ಲಿ ಆರೋಪಗಳ ಗಂಭೀರತೆ ಮತ್ತು ಸಾರ್ವಜನಿಕ ವಲಯದಲ್ಲಿ ಉಂಟಾದ ಪರಿಣಾಮಗಳನ್ನು ಪರಿಗಣಿಸಿ ಸ್ನೇಹಮಯಿ ಕೃಷ್ಣ ಅವರನ್ನು ಪೊಲೀಸರು ಬಂಧಿಸಿದ್ದಾರೆ. ಬಂಧನದ ಬಳಿಕ ಅವರಿಂದ ಹೆಚ್ಚಿನ ಮಾಹಿತಿಯನ್ನು ಸಂಗ್ರಹಿಸುವ ಕಾರ್ಯ ನಡೆಯುತ್ತಿದ್ದು, ಆರೋಪಗಳಿಗೆ ಸಂಬಂಧಿಸಿದ ಸಾಕ್ಷ್ಯಾಧಾರಗಳ ಪರಿಶೀಲನೆ ಮುಂದುವರಿದಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಈ ಬೆಳವಣಿಗೆಯಿಂದ ಮುಡಾ ಸಂಬಂಧಿತ ವಿಚಾರ ಮತ್ತೊಮ್ಮೆ ಪ್ರಮುಖ ಚರ್ಚೆಯ ವಿಷಯವಾಗಿದ್ದು, ಈಗಾಗಲೇ ಹಲವು ವಿವಾದಗಳಿಗೆ ಕಾರಣವಾಗಿದ್ದ ಪ್ರಕರಣಕ್ಕೆ ಹೊಸ ಆಯಾಮ ಸೇರ್ಪಡೆಯಾಗಿದೆ. ಆಡಳಿತಾಧಿಕಾರಿಗಳ ಹೆಸರುಗಳನ್ನು ಒಳಗೊಂಡಿರುವ ಕಾರಣ ಪ್ರಕರಣದ ಸಂವೇದನಾಶೀಲತೆ ಹೆಚ್ಚಿದ್ದು, ತನಿಖೆ ಸಮಗ್ರವಾಗಿ ನಡೆಯುತ್ತಿದೆ.

ಡಿ.ಬಿ. ನಟೇಶ್ ತಮ್ಮ ದೂರಿನಲ್ಲಿ, ತಮ್ಮ ವಿರುದ್ಧ ಮಾಡಲಾದ ಆರೋಪಗಳು ಸಂಪೂರ್ಣ ಸುಳ್ಳು ಮತ್ತು ಆಧಾರರಹಿತವಾಗಿದ್ದು, ತಮ್ಮ ವ್ಯಕ್ತಿತ್ವ ಮತ್ತು ಸೇವಾ ಪ್ರತಿಷ್ಠೆಗೆ ಧಕ್ಕೆ ತರುವ ಉದ್ದೇಶದಿಂದ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಉನ್ನತ ಅಧಿಕಾರಿಗಳ ಹೆಸರುಗಳನ್ನು ಬಳಸಿಕೊಂಡು ತಪ್ಪು ಮಾಹಿತಿ ಹರಡುವುದು ಗಂಭೀರ ವಿಷಯವಾಗಿದ್ದು, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಅಗತ್ಯವೆಂದು ಅವರು ಅಭಿಪ್ರಾಯಪಟ್ಟಿದ್ದಾರೆ.

# ಸಾಮಾಜಿಕ ನ್ಯಾಯದ ಕನ್ನಡಿಯಲ್ಲಿ ಸತೀಶ್ ಜಾರಕಿಹೊಳಿ ಅವರ ಬಿಂಬಗಳಿವೆ: ಕೆ.ವಿ.ಪ್ರಭಾಕರ್



ಬೆಂಗಳೂರು: ಸಾಮಾಜಿಕ ನ್ಯಾಯದ ಕನ್ನಡಿಯಲ್ಲಿ ಸತೀಶ್ ಜಾರಕಿಹೊಳಿ ಅವರ ಬಿಂಬಗಳು ಸ್ಪಷ್ಟವಾಗಿ ಕಾಣಿಸುತ್ತಿವೆ ಎಂದು ಮುಖ್ಯಮಂತ್ರಿಗಳ ಮಾಧ್ಯಮಸಲಹೆಗಾರರಾದ ಕೆ.ವಿ.ಪ್ರಭಾಕರ್ ಅಭಿಪ್ರಾಯಪಟ್ಟರು.

ಸತೀಶ್ ಜಾರಕಿಹೊಳಿ ಅವರಿಗೆ ಪ್ರೆಸ್ ಕ್ಲಬ್ ನೀಡಿದ ವರ್ಷದ ವ್ಯಕ್ತಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಂತಯೇ ಸಾಮಾಜಿಕ ನ್ಯಾಯದ ಬಗ್ಗೆ ಸ್ಪಷ್ಟತೆ ಮತ್ತು ಖಚಿತತೆ ಸತೀಶ್ ಜಾರಕಿಹೊಳಿಯವರಿಗೆ ಇರುವ ಕಾರಣದಿಂದಲೇ ಸಾಮಾಜಿಕ ನ್ಯಾಯದ ಕನ್ನಡಿಯಲ್ಲಿ ಜಾರಕಿಹೊಳಿಯವರನ್ನು ನಾವು ಸ್ಪಷ್ಟವಾಗಿ ಕಾಣಬಹುದಾಗಿದೆ. ರಾಜ್ಯದಲ್ಲಿ ಸಾಮಾಜಿಕ ನ್ಯಾಯದ ತೇರನ್ನು ಎಳೆಯುತ್ತಿರುವ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕೈಗಳ ಪಕ್ಕದಲ್ಲೇ ಜಾರಕಿಹೊಗಿಳಿಯವರ ಕೈಗಳಿವೆ ಎಂದು ನುಡಿದರು.

ಜಾರಕಿಹೊಳಿಯವರು ಹೆಚ್ಚು ಮಾತಾಡುವುದಿಲ್ಲ, ಐವತ್ತು ಮಂದಿ ಸೇರಿರುವ ಸಭೆಯಾಗಲಿ, ಐದು ಲಕ್ಷ ಮಂದಿ ಸೇರಿರುವ ಸಭೆಯಾಗಲಿ ಐದೇ ನಿಮಿಷದಲ್ಲಿ ಮಾತು ಮುಗಿಸುತ್ತಾರೆ ಎಂದು ಬಹಳ ಮಂದಿ ನನಗೆ ಹೇಳಿದ್ದಾರೆ. ಅವರಿಗೆಲ್ಲಾ ನಾನು ಒಂದೇ ಉತ್ತರ ಕೊಡುತ್ತೇನೆ, "ದಡದಲ್ಲಿ ನಿಂತು ನೋಡುವಾಗ ಸಮುದ್ರ ಬಹಳ ಪ್ರಶಾಂತವಾಗಿ ಕಾಣುತ್ತದೆ. ಆದರೆ ಸಮುದ್ರದ ರಭಸ ಇರುವುದು ಅದರ ಆಳದಲ್ಲಿ. ಜಾರಕಿಹೊಳಿಯವರ ಮೌನದ ಆಳದಲ್ಲಿ ಅವರ ರಭಸ ಇದೆ. ಆ ರಭಸ ಅವರ ಕೆಲಸದಲ್ಲಿ ಕಾಣುತ್ತದೆ ಎಂದರು.

ಯಾವತ್ತು Easy chair politics ಗೆ ಒರಗಿಕೊಳ್ಳದ ಸತೀಶ್ ಅವರು ಬಹಳ ಕಷ್ಟವಾದ ಹಾದಿಯನ್ನೇ ಆರಿಸಿಕೊಂಡು ಅದರಲ್ಲಿ ಸಕ್ಸಸ್ ಆಗುತ್ತಾರೆ. ಇದು ಸ್ಪಷ್ಟವಾಗಿ ಮತ್ತೊಮ್ಮೆ ಗೋಚರಿಸಿದ್ದು ಶಿಗ್ಗಾಂವ್ ಉಪ ಚುನಾವಣೆಯಲ್ಲಿ. ಯಾವ ಮಾಧ್ಯಮದವರೂ ಕಲ್ಪಿಸಿಕೊಳ್ಳದ ರೀತಿಯಲ್ಲಿ ಹಲವು ಸವಾಲುಗಳ ನಡುವೆಯೂ ಕಾಂಗ್ರೆಸ್ ಅನ್ನು ಗೆಲ್ಲಿಸಿಕೊಂಡೇ ಬಂದರು. ಇದಕ್ಕಾಗಿ ಅವರು ಮಾಡಿದ ಕೆಲಸವನ್ನು ನಾನು ಬಹಳ ಹತ್ತಿರದಿಂದ ಗಮನಿಸಿದ್ದೇನೆ.

ಮಾನವ ಬಂಧುತ್ವ ವೇದಿಕೆಯ ಕಾರ್ಯಕರ್ತರು ಹೇಗೆ ಇಡೀ ಕ್ಷೇತ್ರದ ತುಂಬ ಹರಡಿ ಹೋಗಿದ್ದರು. ಅವರ ಮೂಲಕ ಹೇಗೆ ಕ್ಷೇತ್ರದ ರಾಜಕೀಯ ಚಿತ್ರಣವನ್ನು ಬದಲಿಸಿದರು ಎನ್ನುವುದು ಪ್ರತಿಯೊಬ್ಬ ಪತ್ರಕರ್ತರು ಮತ್ತು ಸಾಮಾಜಿಕ ಕಾರ್ಯಕರ್ತರಿಗೂ ಪಾಠ ಆಗುತ್ತದೆ ಎಂದು ವಿವರಿಸಿದರು.

ಸೈದ್ಧಾಂತಿಕ ರಾಜಕಾರಣ ಅಳಿವಿನ ಅಂಚಿನಲ್ಲಿರುವ ಈ ಕಾಲಘಟ್ಟದಲ್ಲಿ " ಮಾನವ ಬಂಧುತ್ವ ವೇದಿಕೆ" ಮೂಲಕ ಇಡೀ ರಾಜ್ಯದಲ್ಲಿ ಸೈದ್ಧಾಂತಿಕ ಪಡೆಯನ್ನು ಕಟ್ಟುತ್ತಿದ್ದಾರೆ. ಇವತ್ತು ಅಭಿಮಾನಿ ಪಡೆಯನ್ನು ಕಟ್ಟುವುದು ಬಹಳ ಸಲೀಸು. ಧಾರವಾಹಿ ನಟರೂ ಅಭಿಮಾನಿ ಪಡೆ ಕಟ್ಟುತ್ತಾರೆ. ಆದರೆ ಸೈದ್ಧಾಂತಿಕ ಪಡೆ ಕಟ್ಟುವುದು ಬಹಳ ದೊಡ್ಡ ಸವಾಲು. ಅಧಿಕಾರ-ಹಣ-ಜಾತಿಯ ಬಲ ಇದ್ದರೆ ರಾತ್ರಿ ಬೆಳಗಾಗುವುದರೊಳಗೆ ಅಭಿಮಾನಿಗಳು ಸಾಲುಗಟ್ಟುತ್ತಾರೆ. ಆದರೆ ಸೈದ್ಧಾಂತಿಕ ಪಡೆ ಕಟ್ಟಲು ನಿತ್ಯ ಕಸರತ್ತು ಮಾಡಬೇಕಾಗುತ್ತದೆ. ಈ ಕಸರತ್ತನ್ನು ಮಾನವ ಬಂಧುತ್ವ ವೇದಿಕೆ ಮೂಲಕ ರಾಜ್ಯದ ತುಂಬ ಮಾಡುತ್ತಿದ್ದಾರೆ. ಈ ಮಾನವ ಬಂಧುತ್ವ ವೇದಿಕೆ ಕಾಂಗ್ರೆಸ್ಸಿಗೆ ಸೈದ್ಧಾಂತಿಕವಾಗಿ ನೀರು ಗೊಬ್ಬರ ಹಾಕುತ್ತಿದೆ ಎಂದು ವಿವರಿಸಿದರು.

ಜಾರಕಿಹೊಳಿ ಅವರಲ್ಲದೆ ಬೇರೆ ಯಾರಾದರೂ ಲೋಕೋಪಯೋಗಿ ಇಲಾಖೆ ಸಚಿವರಾಗಿದಿದ್ದರೆ ಇಷ್ಟೊತ್ತಿಗೆ ಹೈರಾಣಾಗಿಬಿಡುತ್ತಿದ್ದರು. ಹಿಂದಿನ ಸರ್ಕಾರ ಮಾಡಿಟ್ಟು ಹೋಗಿರುವ ಅನಾಹುತಗಳು ಮತ್ತು ವಿಪರೀತ ಆರ್ಥಿಕ ಹೊರೆಯ ಬಳಿಕವೂ ಸಮತೋಲನದಿಂದ ಖಾತೆಯನ್ನು ನಿರ್ವಹಿಸುತ್ತಿದ್ದಾರೆ. ಅದಕ್ಕೇ ನಾನು ಆಗಲೇ ಹೇಳಿದ್ದು, ಸತೀಶ್ ಅವರು ಕಷ್ಟವಾದ ಸವಾಲುಗಳಿಗೇ ಕೈ ಹಾಕಿ ಅದರಲ್ಲಿ ಸಕ್ಸಸ್ ಆಗುತ್ತಾರೆ.

ಬೆಳಗಾವಿ ರಾಜಕಾರಣದಲ್ಲಿ ಸಕ್ಸಸ್ ಆದವರು ರಾಜ್ಯ ರಾಜಕಾರಣದಲ್ಲಿ ಸಕ್ಸಸ್ ಆಗುವುದರಲ್ಲಿ ಅನುಮಾನಗಳೇ ಇಲ್ಲ. ಹಾಗೆಯೇ ಬಹಳ ದೊಡ್ಡ ಉದ್ಯಮಿಯಾಗಿ ಸಕ್ಸಸ್ ಆಗಿದ್ದರೂ, ಉದ್ಯಮ ಮತ್ತು ರಾಜಕಾರಣವನ್ನು ಪರಸ್ಪರ ಬೆರೆಸದೆ ಸ್ಪಷ್ಟ ಅಂತರ ಕಾಯ್ದುಕೊಳ್ಳುವಲ್ಲೂ ಸಕ್ಸಸ್ ಆಗಿದ್ದಾರೆ.

ಈ ಎಲ್ಲಾ ಕಾರಣಗಳಿಂದ ಬೆಂಗಳೂರು ಪ್ರೆಸ್ ಕ್ಲಬ್ , ವರ್ಷದ ವ್ಯಕ್ತಿ ಪ್ರಶಸ್ತಿಗೆ ಸತೀಶ್ ಜಾರಕಿಹೊಳಿ ಅವರನ್ನು ಆಯ್ಕೆ ಮಾಡಿರುವುದು ಅತ್ಯಂತ ಸೂಕ್ತವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮಾಜಿ ಅಡ್ವೊಕೇಟ್ ಜನರಲ್ ಪ್ರೊ.ರವಿ ವರ್ಮಕುಮಾರ್ ಅವರು ಪ್ರಶಸ್ತಿ ಪ್ರದಾನ ಮಾಡಿದರು. ಶಾಸಕ ರಿಜ್ವಾನ್ ಅರ್ಷದ್ ಅವರು, ಪ್ರೆಸ್ ಕ್ಲಬ್ ಅಧ್ಯಕ್ಷರಾದ ಶ್ರೀಧರ್ ಮತ್ತು ಪದಾಧಿಕಾರಿಗಳು ಉಪಸ್ಥಿತರಿದ್ದರು.

# ನಂದಿನಿ ಹಾಲಿನ ಉತ್ಪನ್ನಗಳ ಬಗ್ಗೆ ಅಪಪ್ರಚಾರ

## ಆರೋಪ: ಡಾ. ಶರಣ್ಯ ವಿರುದ್ಧ ಎಫ್‌ಐಆರ್



**ಬೆಂಗಳೂರು:** ನಂದಿನಿ ಹಾಲಿನ ಉತ್ಪನ್ನಗಳು ವಿಷಕಾರಿ ಹಾಗೂ ದೀರ್ಘಾವಧಿಯಲ್ಲಿ ಕ್ಯಾನ್ಸರ್‌ಗೆ ಕಾರ ಣವಾಗುತ್ತವೆ ಎಂಬ ಆರೋಪಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿ ಕೊಂಡಿರುವ ಚರ್ಮರೋಗ ತಜ್ಞೆ ಡಾ. ಶರಣ್ಯ ಪದ್ಮಾ ವಿರುದ್ಧ ಕರ್ನಾಟಕ ಹಾಲು ಮಹಾಮಂಡಳಿ (ಕರ್ನಾಟಕ ಹಾಲು ಮಹಾಮಂಡಳಿ) ಪೊಲೀಸ್ ದೂರು ದಾಖಲಿಸಿದೆ. ಈ ದೂರಿನ ಮೇರೆಗೆ ಮಲ್ಲೇಶ್ವರಂ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು, ಪ್ರಕರಣದ ತನಿಖೆ ಪ್ರಾರಂಭವಾಗಿದೆ.

**ಏನಿದು ವಿವಾದ?:**ಮಣಿಪಾಲ್ ಆಸ್ಪತ್ರೆ ಹಾಗೂ ಮಾಲೂರಿನ ಖಾಸಗಿ ಕ್ಲಿನಿಕ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಶರಣ್ಯ ಪದ್ಮಾ ಅವರು ಫೆಬ್ರವರಿ 8ರಂದು ಇನ್‌ಸ್ಟಾಗ್ರಾಂ ಸೇರಿದಂತೆ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ರೀಲ್ಸ್ ವಿಡಿಯೋವನ್ನು ಅಪ್‌ಲೋಡ್ ಮಾಡಿದ್ದರು. ಆ ವಿಡಿಯೋದಲ್ಲಿ ನಂದಿನಿ ಬ್ರಾಂಡ್‌ನ ಕೆಲವು ಉತ್ಪನ್ನಗಳಾದ ಕ್ರೀಮ್ ಬನ್, ಸ್ಟ್ರಾಬೆರಿ ಫ್ಲೇವರ್ಡ್ ಮಿಲ್ಕ್ ಮತ್ತು ಇತರ ಪಾನೀಯಗಳ ಕುರಿತು ಗಂಭೀರ ಆರೋಪಗಳನ್ನು ಮಾಡಿದ್ದರು.

ವೈದ್ಯೆಯ ಹೇಳಿಕೆಯ ಪ್ರಕಾರ, "ಈ ಉತ್ಪನ್ನಗಳು ಟಾಕ್ಸಿಕ್ ಹಾಗೂ ರಾಸಾಯನಿ ಕಯುಕ್ತವಾಗಿವೆ. ದೀರ್ಘಾ ವಧಿಯಲ್ಲಿ ಇವುಗಳನ್ನು ಸೇವಿಸುವುದರಿಂದ ಆಟೋ ಇಮ್ಯೂನ್ ಕಾಯಿಲೆಗಳು ಮತ್ತು ಭವಿಷ್ಯದಲ್ಲಿ ಕ್ಯಾನ್ಸರ್ ಉಂಟಾಗಬಹುದು. ಸ್ಟ್ರಾಬೆರಿ ಹಾಲಿನಲ್ಲಿ ನೈಸರ್ಗಿಕ ಹಣ್ಣಿನ ಅಂಶವಿಲ್ಲ, ಕೃತಕ ಬಣ್ಣ ಮತ್ತು ಪ್ರಿಸರ್ವೇಟಿವ್ಸ್ ಬಳಕೆಯಾಗಿದೆ. ಇದು ಆಹಾರವಲ್ಲ, ವಿಷ" ಎಂದು ಅವರು ಹೇಳಿದ್ದಾರೆ.

ಈ ಹೇಳಿಕೆಗಳು ಸಾಮಾಜಿಕ ಜಾಲ ತಾಣಗಳಲ್ಲಿ ವೇಗವಾಗಿ ವೈರಲ್ ಆಗುತ್ತಿದ್ದಂತೆ, ಗ್ರಾಹಕರಲ್ಲಿ ಗೊಂದಲ ಉಂಟಾಯಿತು. ಅನೇಕರು ವಿಡಿಯೋವನ್ನು ಹಂಚಿಕೊಂಡು ತಮ್ಮ ಆತಂಕವನ್ನು ವ್ಯಕ್ತಪಡಿಸಿದರು.

**ಕೆಎಂಎಫ್ ಪ್ರತಿಕ್ರಿಯೆ:**ವೈದ್ಯೆಯ ಆರೋಪ ಗಳನ್ನು ಕರ್ನಾಟಕ ಹಾಲು ಮಹಾಮಂಡಳಿ ತೀವ್ರವಾಗಿ ಖಂಡಿಸಿದೆ. "ನಂದಿನಿ ಉತ್ಪನ್ನಗಳು ಭಾರತೀಯ ಆಹಾರ ಸುರಕ್ಷತಾ ಮತ್ತು ಮಾನದಂಡ ಪ್ರಾಧಿಕಾರ ನಿಗದಿಪಡಿಸಿರುವ ಎಲ್ಲಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿವೆ. ನಮ್ಮ ಉತ್ಪನ್ನಗಳು ಗುಣಮಟ್ಟ ಮತ್ತು ಸುರಕ್ಷತೆಯಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ" ಎಂದು ಕೆಎಂಎಫ್ ಸ್ಪಷ್ಟಪಡಿಸಿದೆ.

ಇನ್ನೂ ಮುಂದೆ, "ಕೋಟ್ಯಂತರ ಗ್ರಾಹಕರು ಬಾಲ್ಯದಿಂದಲೇ ನಂದಿನಿ ಉತ್ಪನ್ನಗಳನ್ನು ವಿಶ್ವಾಸದಿಂದ ಬಳಸುತ್ತಿದ್ದಾರೆ. ಆಧಾರರಹಿತ ಹಾಗೂ ದುರುದ್ದೇಶಪೂರಿತ ಹೇಳಿಕೆಗಳ ಮೂಲಕ ಬ್ರಾಂಡ್ ಘನತೆಗೆ ಧಕ್ಕೆ ತರುವ ಪ್ರಯತ್ನವನ್ನು ಸಹಿಸಲಾಗುವುದಿಲ್ಲ" ಎಂದು ಸಂಸ್ಥೆ ಹೇಳಿದೆ.

**ಎಫ್‌ಐಆರ್ ದಾಖಲು:** ಪದ್ಮಾವತಿ ಎಂಬುವರು ನೀಡಿದ ದೂರಿನ ಆಧಾರದಲ್ಲಿ ಮಲ್ಲೇಶ್ವರಂ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಭಾರತೀಯ ನ್ಯಾಯ ಸಂಹಿತೆ ಸೆಕ್ಷನ್ 353(1)(ಬಿ) ಅಡಿಯಲ್ಲಿ 'ಸುಳ್ಳು ಮಾಹಿತಿ ಹರಡುವುದು' ಎಂಬ ಆರೋಪದಡಿ ಎಫ್‌ಐಆರ್ ದಾಖಲಿಸಲಾಗಿದೆ. ಪೊಲೀಸರು ವಿಡಿಯೋ ವಿಷಯ, ಹೇಳಿಕೆಗಳ ಆಧಾರ ಮತ್ತು ಉದ್ದೇಶಗಳ ಕುರಿತು ತನಿಖೆ ನಡೆಸುತ್ತಿದ್ದಾರೆ.

**ಗ್ರಾಹಕರಲ್ಲಿ ಗೊಂದಲ:** ನಂದಿನಿ ಬ್ರಾಂಡ್ ಕರ್ನಾಟಕದ ಪ್ರಮುಖ ಹಾಲು ಮತ್ತು ಹಾಲು ಉತ್ಪನ್ನಗಳ ಬ್ರಾಂಡ್ ಆಗಿದ್ದು, ಗ್ರಾಮೀಣ ಹಾಲು ಉತ್ಪಾದಕರಿಗೆ ಆದಾಯದ ಮೂಲವಾಗಿದೆ. ಇಂತಹ ಆರೋಪಗಳು ಗ್ರಾಹಕರಲ್ಲಿ ಗೊಂದಲ ಸೃಷ್ಟಿಸುವುದರ ಜೊತೆಗೆ ರೈತರು ಮತ್ತು ಹಾಲು ಸಹಕಾರಿಗಳಿಗೆ ಆರ್ಥಿಕ ಪರಿಣಾಮ ಉಂಟುಮಾಡುವ ಸಾಧ್ಯತೆಯೂ ಇದೆ.

# ಪೊಲೀಸಪ್ಪನ ಕಾಟಕ್ಕೆ ವಿಧವೆ ಮಹಿಳೆ ಆತ್ಮಹತ್ಯೆ





**ಶಿವಮೊಗ್ಗ:** ಜಿಲ್ಲೆಯ ಭದ್ರಾವತಿ ತಾಲೂಕಿನ ಸಿದ್ದಾಪುರ ಗ್ರಾಮದಲ್ಲಿ ಮನಸ್ಸು ಮಿಡಿಯುವಂತಹ ಘಟನೆ ಸಂಭವಿಸಿದ್ದು, ಪೊಲೀಸ್ ಸಿಬ್ಬಂದಿಯ ಕಿರುಕುಳ ತಾಳಲಾರದೆ ವಿಧವೆ ಮಹಿಳೆಯೊಬ್ಬರು ವಾಟ್ಸಾಪ್‌ನಲ್ಲಿ ಡೆತ್ ನೋಟ್ ಬರೆದು ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಸ್ವಾತಿ ಆತ್ಮಹತ್ಯೆ ಮಾಡಿಕೊಂಡ ಮಹಿಳೆಯಾಗಿದ್ದು, ಡೆತ್ ನೋಟ್‌ನಲ್ಲಿ ತೀರ್ಥಹಳ್ಳಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮೋಹನ್ ಎಂಬ ಪೊಲೀಸ್ ಸಿಬ್ಬಂದಿಯ ಹೆಸರನ್ನು ಉಲ್ಲೇಖಿಸಿರುವುದು ಪ್ರಕರಣಕ್ಕೆ ಮತ್ತಷ್ಟು ಗಂಭೀರತೆ ನೀಡಿದೆ.

ಸ್ವಾತಿಯ ಆತ್ಮಹತ್ಯೆಯಿಂದ ಕುಟುಂಬದಲ್ಲಿ ದುಃಖದ ವಾತಾವರಣ ನಿರ್ಮಾಣವಾಗಿದ್ದು, ತಾಯಿ-ತಂದೆ ಸಾವಿನ ನಂತರ ಇದೀಗ ತಾಯಿಯನ್ನೂ ಕಳೆದುಕೊಂಡ ಎರಡು ಹೆಣ್ಣು ಮಕ್ಕಳು ಅನಾಥರಾಗಿದ್ದಾರೆ. ಮಕ್ಕಳ ಅಳಲು ಮತ್ತು ಕುಟುಂಬಸ್ಥರ ಆಕ್ರಂದನ ಗ್ರಾಮದಲ್ಲಿ ಮನಕಲಕುವ ದೃಶ್ಯ ಸೃಷ್ಟಿಸಿದೆ. ಮೃತಳ ಕುಟುಂಬಸ್ಥರು ಹಾಗೂ ಸಂಬಂಧಿಕರು, ಸ್ವಾತಿಗೆ ಕಿರುಕುಳ ನೀಡಿದ ಆರೋಪದ ಮೇಲೆ ಸಂಬಂಧಿತ ಪೊಲೀಸ್ ಸಿಬ್ಬಂದಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಸ್ವಾತಿಗೆ ಸುಮಾರು ಏಳು ವರ್ಷಗಳ ಹಿಂದೆ ಜಗದೀಶ್ ಅವರೊಂದಿಗೆ ವಿವಾಹವಾಗಿತ್ತು. ಆದರೆ ಒಂದು ವಾರದ ಹಿಂದಷ್ಟೇ ಜಗದೀಶ್ ಅನಾರೋಗ್ಯದಿಂದ ಸಾವನ್ನಪ್ಪಿದ್ದರಿಂದ ಕುಟುಂಬದಲ್ಲಿ ದುಃಖದ ವಾತಾವರಣ ಇತ್ತು. ಇದೇ ಸಂದರ್ಭವನ್ನು ದುರುಪಯೋಗಪಡಿಸಿಕೊಂಡು ಪೊಲೀಸ್ ಸಿಬ್ಬಂದಿ ಮೋಹನ್ ಸ್ವಾತಿಗೆ ಫೇಸ್‌ಬುಕ್ ಮೂಲಕ ಸಂದೇಶಗಳನ್ನು ಕಳುಹಿಸಿದ್ದಾನೆ ಎಂಬ ಆರೋಪ ಕೇಳಿಬಂದಿದೆ. ಅಜ್ಞಾತ ವ್ಯಕ್ತಿಯಿಂದ ಸಂದೇಶಗಳು ಬರುತ್ತಿರುವುದನ್ನು ಗಮನಿಸಿದ ಸ್ವಾತಿ ಆತನ ಖಾತೆಯನ್ನು ಬ್ಲಾಕ್ ಮಾಡಿದ್ದರು.

ಈ ಘಟನೆ ಬಳಿಕ ಕೋಪಗೊಂಡ ಮೋಹನ್ ಬೇರೆ ಖಾತೆಗಳಿಂದ ಸ್ವಾತಿ ಬಗ್ಗೆ ಅಪಪ್ರಚಾರ ನಡೆಸಿ ಅವಳ ವ್ಯಕ್ತಿತ್ವಕ್ಕೆ ಧಕ್ಕೆ ತರುವ ರೀತಿಯಲ್ಲಿ ಮಾತುಗಳನ್ನು ಹರಡಿದ್ದಾನೆ ಎಂಬ ಆರೋಪವಿದೆ. ಈ ರೀತಿಯ ಕಿರುಕುಳ ಹಾಗೂ ಅವಮಾನಕಾರಿ ಮಾತುಗಳಿಂದ ಮಾನಸಿಕವಾಗಿ ಕುಗ್ಗಿದ ಸ್ವಾತಿ ಕೊನೆಗೆ ಆತ್ಮಹತ್ಯೆಗೆ ಶರಣಾಗಿದ್ದಾಳೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ. ಈ ಘಟನೆ ನ್ಯೂ ಟೌನ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿರುವುದು ತಿಳಿದುಬಂದಿದೆ.

ಸ್ವಾತಿ ಬರೆದಿರುವ ಡೆತ್ ನೋಟ್‌ನಲ್ಲಿ ತನ್ನ ಬಗ್ಗೆ ತಪ್ಪು ಮಾಹಿತಿ ಹರಡಲಾಗಿದೆ ಮತ್ತು ಅದನ್ನು ತಾಳಲಾರದೆ ಈ ನಿರ್ಧಾರ ತೆಗೆದುಕೊಳ್ಳುತ್ತಿದ್ದೇನೆ ಎಂದು ಉಲ್ಲೇಖಿಸಲಾಗಿದೆ. "ಅಮ್ಮ, ನನ್ನ ಬಗ್ಗೆ ಇಲ್ಲದಿರುವುದನ್ನು ಕೆಟ್ಟದಾಗಿ ಜನರಿಗೆ ಹೇಳಿದ್ದಾರೆ. ನನಗೆ ಇದನ್ನು ಸಹಿಸಲು ಆಗುತ್ತಿಲ್ಲ. ನನ್ನ ಗಂಡ ಸಾವಿನ ನಂತರ ಈ ಮೋಹನ್ ಎಂಬ ಪೊಲೀಸ್ ನನ್ನ ಬಗ್ಗೆ ತಪ್ಪಾಗಿ ಮಾತನಾಡಿರುವುದು ನನಗೆ ಇಂದು ಬೆಳಿಗ್ಗೆ ತಿಳಿಯಿತು. ಅವನನ್ನು ಮಾತ್ರ ಸುಮ್ಮನೇ ಬಿಡಬೇಡಿ" ಎಂದು ಸ್ವಾತಿ ನೋವಿನಿಂದ ಬರೆದಿರುವುದು ತಿಳಿದುಬಂದಿದೆ.

ಇನ್ನೂ ಡೆತ್ ನೋಟ್‌ನಲ್ಲಿ, "ಅವರು ಯಾರು ಎಂಬುದೇ ನನಗೆ ಗೊತ್ತಿರಲಿಲ್ಲ. ಫೇಸ್‌ಬುಕ್‌ನಲ್ಲಿ ಸಂದೇಶ ಕಳುಹಿಸಿದ್ದರು. ನಾನು ಬ್ಲಾಕ್ ಮಾಡಿದ್ದಕ್ಕೆ ಸಿಟ್ಟಿನಿಂದ ನನ್ನ ಬಗ್ಗೆ ಅಪಪ್ರಚಾರ ಮಾಡಿದ್ದಾರೆ. ನನ್ನ ಮಕ್ಕಳನ್ನು ಚೆನ್ನಾಗಿ ನೋಡಿಕೊಳ್ಳಿ" ಎಂದು ತನ್ನ ಅಂತಿಮ ಮನವಿಯನ್ನು ವ್ಯಕ್ತಪಡಿಸಿರುವುದು ಕುಟುಂಬಸ್ಥರ ನೋವನ್ನು ಮತ್ತಷ್ಟು ಹೆಚ್ಚಿಸಿದೆ.

ಘಟನೆಯ ಮಾಹಿತಿ ತಿಳಿದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನೆ ಮಾಡಲಾಗಿದೆ. ಪ್ರಕರಣ ಸಂಬಂಧ ತನಿಖೆ ಆರಂಭವಾಗಿದ್ದು, ಡೆತ್ ನೋಟ್ ಹಾಗೂ ಕುಟುಂಬಸ್ಥರ ಆರೋಪಗಳ ಆಧಾರದ ಮೇಲೆ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. ಈ ನಡುವೆ ಆರೋಪಿತ ಪೊಲೀಸ್ ಸಿಬ್ಬಂದಿಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಹಾಗೂ ಸ್ವಾತಿಗೆ ನ್ಯಾಯ ದೊರಕಬೇಕು ಎಂಬ ಆಗ್ರಹ ಗ್ರಾಮಸ್ಥರು ಮತ್ತು ಕುಟುಂಬಸ್ಥರಿಂದ ಕೇಳಿಬರುತ್ತಿದೆ.

# ಪ್ರವಾಸಕ್ಕೆ ತೆರಳಲು ಗಂಡ ಅನುಮತಿ ಕೊಡ್ಲಿಲ್ಲ ಅಂತ ಗೃಹಿಣಿ ಆತ್ಮಹತ್ಯೆ



**ಮೈಸೂರು:** ನಗರದ ಸರಸ್ವತಿ ಪುರಂ ಪ್ರದೇಶದಲ್ಲಿ ಮನಕಲುಕುವ ಘಟನೆ ಸಂಭವಿಸಿದ್ದು, ಪ್ರವಾಸಕ್ಕೆ ತೆರಳುವ ವಿಚಾರವಾಗಿ ಗಂಡ ಅನುಮತಿ ನಿರಾಕರಿಸಿದ ಹಿನ್ನೆಲೆ ಗೃಹಿಣಿಯೊಬ್ಬರು ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ತಿಳಿದು ಬಂದಿದೆ. ಆದರೆ ಮೃತೆಯ ಕುಟುಂಬಸ್ಥರು ಈ ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿ ಇದು ಆತ್ಮಹತ್ಯೆಯಲ್ಲ, ಕೊಲೆ ಆಗಿರಬಹುದೆಂದು ಆರೋಪಿಸಿರುವುದರಿಂದ ಪ್ರಕರಣಕ್ಕೆ ಮತ್ತಷ್ಟು ತಿರುವು ದೊರೆತಿದೆ.

ಸರಸ್ವತಿಪುರಂ ನಿವಾಸಿ 46 ವರ್ಷದ ಸಂಧ್ಯಾ ಮೃತ ಗೃಹಿಣಿಯಾಗಿದ್ದು, ಮನೆಯ ಕೋಣೆಯಲ್ಲಿರುವ ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿದುಕೊಂಡ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ಮೂಲತಃ ಬೆಂಗಳೂರಿನವರಾದ ಸಂಧ್ಯಾ ಸುಮಾರು 25 ವರ್ಷಗಳ ಹಿಂದೆ ಚಾಮರಾಜನಗರ ಜಿಲ್ಲೆಯ ರಂಗನಾಥ್ ಅವರನ್ನು ವಿವಾಹವಾಗಿದ್ದರು. ದಂಪತಿಗೆ ಇಬ್ಬರು ಮಕ್ಕಳು ಇದ್ದು, ಪುತ್ರಿ ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿದ್ದರೆ, ಪುತ್ರ ಮನೆಯಲ್ಲೇ ತಂದೆ-ತಾಯಿಯೊಂದಿಗೆ ವಾಸಿಸು ತ್ತಿದ್ದಾನೆ ಎಂದು ತಿಳಿದುಬಂದಿದೆ.

ಸಂಧ್ಯಾ ಪತಿ ಮತ್ತು ಮಗನೊಂದಿಗೆ ಸರಸ್ವತಿಪುರಂನ ಮನೆಯಲ್ಲಿ ವಾಸವಾಗಿದ್ದು, ಕುಟುಂಬ ಜೀವನ ಸಾಮಾನ್ಯವಾಗಿಯೇ ಸಾಗುತ್ತಿತ್ತು ಎಂದು ನೆರೆಹೊರೆಯವರು ತಿಳಿಸಿದ್ದಾರೆ. ಆದರೆ ನಿನ್ನೆ ರಾತ್ರಿ ಪ್ರವಾಸಕ್ಕೆ ತೆರಳುವ ವಿಷಯವಾಗಿ ಗಂಡ-ಹೆಂಡತಿ ನಡುವೆ ವಾಗ್ವಾದ ಉಂಟಾಗಿ, ಬಳಿಕ ಪತಿ ಮನೆಯಿಂದ ಹೊರ ಹೋಗಿದ್ದಾಗ ಸಂಧ್ಯಾ ನೇಣು ಬಿಗಿದುಕೊಂಡಿರುವುದು ತಿಳಿದುಬಂದಿದೆ.

ಘಟನೆಯ ಬಳಿಕ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನೆ ಮಾಡಿದ್ದಾರೆ. ಸಂಧ್ಯಾ ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿರುವ ಸಹೋದರ ಗುರುಮೂರ್ತಿ, ಪತಿ ಹಾಗೂ ಮಗನ ಮೇಲೆ ಅನುಮಾನ ವ್ಯಕ್ತಪಡಿಸಿ ದೂರು ನೀಡಿದ್ದು, ಸರಸ್ವತಿಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರಿಸಲಾಗಿದೆ.

# ನಗರೋತ್ಥಾನ ಕಾಮಗಾರಿಗಳು ಶೀಘ್ರ ಪೂರ್ಣಗೊಳಿಸಿ: ಸಚಿವ ರಹೀಂ ಖಾನ್

ಸರ್ಕಾರದಿಂದ ಬಿಡುಗಡೆಯಾದ ಅನುದಾನ ಆಯಾ ಆರ್ಥಿಕ ವರ್ಷದಲ್ಲೇ ಬಳಕೆ ಮಾಡಬೇಕು ಅಮೃತ್ ನಗರೋತ್ಥಾನ- 04 ರಡಿ ಕೈಗೊಂಡಿರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಪೌರಾಡಳಿತ ಹಾಗೂ ಹಜ್ ಇಲಾಖೆ ಸಚಿವರಾದ ರಹೀಂ ಖಾನ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ನಗರ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರೋತ್ಥಾನ-04 ಮೂರು ವರ್ಷದ ಯೋಜನೆ, ಕೈಗೆತ್ತಿ ಕೊಂಡಿರುವ ಕಾಮಗಾರಿಗಳು ಇನ್ನು ಬಾಕಿ ಇರುವುದರಿಂದ ಯೋಜನೆಯನ್ನು 4 ವರ್ಷಗಳಿಗೆ ವಿಸ್ತರಣೆ ಮಾಡಲಾಗಿದೆ. ರಾಜ್ಯಾದ್ಯಂತ ನಗರೋತ್ಥಾನ-4 ರಲ್ಲಿ 600 ಕಾಮಗಾರಿಗಳು ಬಾಕಿ ಉಳಿದಿದೆ. ನಗರೋತ್ಥಾನ-05 ಕ್ಕೆ 5000 ಕೋಟಿ ನೀಡಲು ಆರ್ಥಿಕ ಇಲಾಖೆಗೆ ವರದಿ ನೀಡಲಾಗಿದೆ. ಮೊದಲು ನಗರೋತ್ಥಾನ-4 ಕಾಮಗಾರಿಗಳು ಶೀಘ್ರ ಪೂರ್ಣಗೊಳ್ಳಬೇಕು ಎಂದರು.

ಮುಂಬರುವ ಬೇಸಿಗೆ ಸಮಯದಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣ ಆಗದಂತೆ ನೋಡಿಕೊಳ್ಳಬೇಕು. ಒಂದು ವೇಳೆ ಸಮಸ್ಯೆ ಉಂಟಾಗುವ ಪ್ರದೇಶದಲ್ಲಿ ಮೊದಲೇ ಅಗತ್ಯ ತಯಾರಿ ಮಾಡಿಕೊಳ್ಳಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಬಾಕಿ ಇರುವ ತೆರಿಗೆಯನ್ನು ಶೀಘ್ರ ವಸೂಲಾತಿ ಮಾಡಿ**

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಾಕಿ ಇರುವ ಆಸ್ತಿ ತೆರಿಗೆ, ನೀರಿನ ತೆರಿಗೆ, ಅಂಗಡಿ ಮಳಿಗೆಗಳ ಬಾಡಿಗೆ ತೆರಿಗೆ, ಉದ್ದಿಮೆ ಪರವಾನಗಿ ತೆರಿಗೆ ವಸೂಲಾತಿಯಲ್ಲಿ ಶೇಕಡ 100% ರಷ್ಟು ಪ್ರಗತಿ ಸಾಧಿಸಿ, ಜೊತೆಗೆ 10 ವರ್ಷಗಳಿಂದ ಒಂದೇ ರೀತಿಯ ತೆರಿಗೆ ಕಟ್ಟುತ್ತಿರುವ ತೆರಿಗೆದಾರರ ಮನೆಗಳಿಗೆ ಭೇಟಿ ನೀಡಿ, ಅಲ್ಲಿ ಎಷ್ಟು ಮಹಡಿ ಮನೆಗಳಿವೆ, ಒಂದೇ ಮನೆಗೆ ಬಾಡಿಗೆ ಕಟ್ಟುತ್ತಿದ್ದಾರೆ, ಎಷ್ಟು ಮನೆಗಳಿಗೆ ಬಾಡಿಗೆ ಕಟ್ಟುತ್ತಿದ್ದಾರೆ ಎನ್ನುವುದನ್ನು ಪರಿಶೀಲನೆ ಮಾಡಿ ಎಂದರು.

**ಇ-ಖಾತೆ ಮಾಡಲು ವಿಶೇಷ ಶಿಬಿರ ಆಯೋಜಿಸಿ:**ಅನಧಿಕೃತ ಆಸ್ತಿಗಳನ್ನು ಆಸ್ತಿ ತೆರಿಗೆ ವ್ಯಾಪ್ತಿಗೆ ಒಳಪಡಿಸಿ, ಪ್ರತ್ಯೇಕ ವಹಿ (ಬಿ-ರಿಜಿಸ್ಟರ್) ಯಲ್ಲಿ ದಾಖಲಿಸಲು ಅವಕಾಶ ಕಲ್ಪಿಸಿದ್ದು, ಇದರಿಂದ ನಗರ ಸ್ಥಳೀಯ ಸಂಸ್ಥೆಗಳಿಗೆ ಹೆಚ್ಚಿನ ತೆರಿಗೆ ಸಂಗ್ರಹಣೆ ಮಾಡಲು ಅನುಕೂಲವಾಗುತ್ತದೆ. ಹಾಗೂ ಸಾರ್ವಜನಿಕರಿಗೆ ತಮ್ಮ ಆಸ್ತಿಯ ಇ-ಖಾತಾ ದೊರೆಯುವುದರಿಂದ ವಹಿವಾಟುಗಳನ್ನು ನಡೆಸಲು ಕೂಡ ಅನುಕೂಲ ವಾಗುತ್ತದೆ. ಹಾಗಾಗಿ ಸಂಬಂಧಪಟ್ಟ ಅಧಿಕಾರಿಗಳು ನಗರ ಸ್ಥಳೀಯ ಸಂಸ್ಥೆಗಳಲ್ಲಿ -ಅಭಿಯಾನವನ್ನು ನಡೆಸಿ ನಿಯುಮಿತವಾಗಿ ಪರಿಶೀಲನೆ ನಡೆಸಿ ಸಾರ್ವಜನಿಕರಿಗೆ ಯಾವುದೇ ರೀತಿ ತೊಂದರೆಯಾಗದಂತೆ ನಿಗಧಿಪಡಿಸಿದ ಸಮಯದೊಳಗೆ ಇ-ಖಾತಾ ದೊರೆಯುವಂತೆ ಕ್ರಮ ಕೈಗೊಳ್ಳಿ ಎಂದರು. ಇದಕ್ಕೂ ಮುನ್ನ ದೇವನಹಳ್ಳಿ ಪಟ್ಟಣದ ಎಸ್.ಎಫ್.ಟಿ.ಪಿ ಘಟಕ ಹಾಗೂ ಸಿಹಿನೀರು ಕೆರೆಯ ನೀರು ಸಂಸ್ಕರಣಾ ಘಟಕಗಳಿಗೆ ಪೌರಾಡಳಿತ ಸಚಿವರು ಭೇಟಿ ನೀಡಿ, ಮಾಹಿತಿ ಪಡೆದರು.

ಸಭೆಯಲ್ಲಿ ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರಾದ ಡಾ. ಪಿ.ಎನ್ ರವಿಂದ್ರ, ಜಿಲ್ಲಾಧಿಕಾರಿ ಎ.ಬಿ ಬಸವರಾಜು, ಸಚಿವರ ಆಪ್ತ ಕಾರ್ಯದರ್ಶಿ ಡಾ. ಮುರಳೀಧರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ರಮೇಶ್, ದೊಡ್ಡಬಳ್ಳಾಪುರ ನಗರಸಭೆ ಅಧ್ಯಕ್ಷರಾದ ಸುಮಿತ್ರಾ ಕೆ, ಉಪಾಧ್ಯಕ್ಷರಾದ ಎಂ. ಮಲ್ಲೇಶ್, ಪೌರಾಡಳಿತ ನಿರ್ದೇಶನಾಲಯದ ಬಸವರಾಜ ಸೇರಿ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.